ಸಂಪುಟ 01 | ಸಂಚಿಕೆ 223 ಶನಿವಾರ 17 ಅಕ್ಟೋಬರ್ 2026 | ಪುಟ 4 | ಬೆಲೆ-2 ರೂ.

Posting registration number : RCR/RNP/116/2026-2028

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

ನೈಜ್ಯ ದೇಸೆ

NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ
ಮಾನ್ವಿ, ಲಿಂಗಸೂರು,
ರಾಯಚೂರ,ದೇವದುರ್ಗ
ಬಳ್ಳಾರಿ, ಕೊಪ್ಪಳ
ಯಾದಗಿರಿ, ಕಲಬುರ್ಗಿ,
ಬೀದರ, ವಿಜಯಪುರ.
ಗದಗ, ವಿಜಯನಗರ.
ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

ಈ ದಿನದ ವಿಶೇಷ

1)ಸರ್ ಸೈಯದ್ ಅಹ್ಮದ್ ಖಾನ್ ಜನ್ಮದಿನ
Sir Syed Ahmad Khan Birth Anniversary
ಇವರು 1817ರ ಅಕ್ಟೋಬರ್ 17ರಂದು ಜನಿಸಿದರು.
ಭಾರತೀಯ ಶಿಕ್ಷಣ ಸುಧಾರಕ ಮತ್ತು ಸಮಾಜ ಸುಧಾರಕರಾಗಿದ್ದರು.
ಆಧುನಿಕ ಶಿಕ್ಷಣದ ಅಭಿವೃದ್ಧಿಗೆ ಮಹತ್ವದ ಕೊಡುಗೆ ನೀಡಿದರು.

2) ಸ್ವಾಮಿ ರಾಮತೀರ್ಥರ ಪುಣ್ಯತಿಥಿ
Swami Ramtirtha Death Anniversary
ಇವರು ಭಾರತೀಯ ಆಧ್ಯಾತ್ಮಿಕ ಚಿಂತಕ ಮತ್ತು ತತ್ವಜ್ಞಾನಿಯಾಗಿದ್ದರು.
ವೇದಾಂತ ತತ್ವ ಮತ್ತು ಆತ್ಮಜ್ಞಾನದ ಸಂದೇಶವನ್ನು ಜನರಿಗೆ ಸಾರಿದರು.

3)ಅಮೂರ್ತ ಸಾಂಸ್ಕೃತಿಕ ಪರಂಪರೆಯ ಅಂತರರಾಷ್ಟ್ರೀಯ ದಿನ International Day of the Intangible Cultural Heritage ಅಮೂರ್ತ ಸಾಂಸ್ಕೃತಿಕ ಪರಂಪರೆಯನ್ನು ಸಂರಕ್ಷಿಸುವುದು, ಅದರ ಮಹತ್ವದ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುವುದು ಮತ್ತು ಮುಂದಿನ ಪೀಳಿಗೆಗೆ ನಮ್ಮ ಸಂಸ್ಕೃತಿ ಹಾಗೂ ಸಂಪ್ರದಾಯಗಳನ್ನು ಪರಿಚಯಿಸುವುದು ಈ ದಿನದ ಮುಖ್ಯ ಉದ್ದೇಶವಾಗಿದೆ.

ಸುಭಾಷಿತ

ಹಸಿದವರಿಗೆ ನಮ್ಮಿಂದ ಊಟ ಹಾಕಲು
ಆಗದಿದ್ದಾಗ ಊಟ ಹಾಕುವವರ
ಮನೆಯನ್ನಾದರೂ ತೋರಿಸಬೇಕು.

-ಗಳಗನಾಥ

ನೈಜ್ಯ ದೇಸೆ
ಕನ್ನಡ ದಿನಪತ್ರಿಕೆಯನ್ನು
ತಪ್ಪದೆ ಓದಿರಿ.

ಕರ್ನಾಟಕದ ನೂತನ ರಾಜ್ಯಪಾಲ

22 ನೇ ರಾಜ್ಯಪಾಲರಾಗಿ ಡಾ.ಸುಧಾ ಯಾದವ್ ಪ್ರಮಾಣ ವಚನ ಸ್ವೀಕಾರ

ನೈಜ್ಯ ದೇಸೆ ನ್ಯೂಸ್

ಬೆಂಗಳೂರು: ಕರ್ನಾಟಕ ರಾಜ್ಯದ 22 ನೇ ರಾಜ್ಯಪಾಲರಾಗಿ ಡಾ.ಸುಧಾ ಯಾದವ್ ಅವರು ಇಂದು ಪ್ರಮಾಣ ವಚನ ಸ್ವೀಕರಿಸಿದರು. ಬೆಂಗಳೂರಿನ ಲೋಕಭವನದಲ್ಲಿ ನಡೆದ ಸಮಾರಂಭದಲ್ಲಿ ಕರ್ನಾಟಕ ಹೈಕೋರ್ಟ್‌ನ ಮುಖ್ಯ ನ್ಯಾಯಮೂರ್ತಿ ವಿಭು ಬಖ್ರು ಅವರು ಸುಧಾ ಯಾದವ್ ಅವರಿಗೆ ರಾಜ್ಯಪಾಲರ ಹುದ್ದೆಯ ಪ್ರಮಾಣವಚನ ಬೋಧಿಸಿದರು.ಇದರೊಂದಿಗೆ 2021ರ ಜುಲೈ 11ರಿಂದ ಕರ್ನಾಟಕದ ರಾಜ್ಯಪಾಲರಾಗಿ ಕಾರ್ಯನಿರ್ವಹಿಸುತ್ತಿದ್ದ ಥಾವರ್ ಚಂದ್ ಗೆಹ್ಲೋಟ್ ಅವರ ಅಧಿಕಾರಾವಧಿ ಅಂತ್ಯಗೊಂಡಿದ್ದು, ಅವರ ಸ್ಥಾನದಲ್ಲಿ ಸುಧಾ ಯಾದವ್ ಅವರು ಕಾರ್ಯಭಾರ ವಹಿಸಿಕೊಂಡಿದ್ದಾರೆ.

ಇಂದು ನಡೆದ ಸಮಾರಂಭದಲ್ಲಿ ಸುಧಾ ಯಾದವ್ ಅವರು,ಕರ್ನಾಟಕದ ರಾಜ್ಯಪಾಲರಾಗಿ ಸಂವಿಧಾನ ರಕ್ಷಣೆ, ರಾಜ್ಯದ ಜನರಿಗೆ ಸೇವೆ ಸಲ್ಲಿಸುತ್ತೇನೆ. ಕಾನೂನು ಪಾಲನೆ ಮಾಡುತ್ತೇನೆ ಎಂದು ದೇವರ ಹೆಸರಿನಲ್ಲಿ ಪ್ರಮಾಣ ವಚನ ಸ್ವೀಕರಿಸಿದರು. ನಂತರ ಜವಾಬ್ದಾರಿ ವಹಿಸಿಕೊಳ್ಳುವ ದಸ್ತಾವೇಜುಗಳಿಗೆ ಸಹಿ ಹಾಕಿದರು.ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ನಿರ್ಗಮಿತ ರಾಜ್ಯಪಾಲ ಥಾವರ್ ಚಂದ್ ಗೆಲ್ಹೋಟ್, ಮುಖ್ಯ ನ್ಯಾಯಮೂರ್ತಿ ವಿಭು ಬಖ್ರು ನೂತನ ರಾಜ್ಯಪಾಲರಿಗೆ ಹೂ ಗುಚ್ಛ ನೀಡಿ ಅಭಿನಂದಿಸಿದರು. ಈ ಸಮಯದಲ್ಲಿ ಥಾವರ್ ಚಂದ್ ಗೆಲ್ಹೋಟ್ ತಮ ಕುರ್ಚಿಯನ್ನು ಹಾಲಿ ರಾಜ್ಯಪಾಲರಿಗೆ ಬಿಟ್ಟುಕೊಟ್ಟರು.



ಅಶ್ವಾರೋಹಿ ದಳದ ಬೆಂಗಾವಲಿನಲ್ಲಿ ತೆರಳಿದ ರಾಜ್ಯಪಾಲರು ಪೊಲೀಸ್ ಗೌರವ ರಕ್ಷೆಯನ್ನು ಸ್ವೀಕರಿಸಿದರು. ಲೋಕಭವನದ ತಮ ಕಚೇರಿಗೆ ತೆರಳಿ, ಅಧಿಕೃತವಾಗಿ ಕಾರ್ಯಾಬಾರ ಆರಂಭಿಸಿದರು. ಲೋಕಭವನದಲ್ಲಿ ಗಣ್ಯರೊಂದಿಗೆ ನಿಂತು ಫೋಟೋಗೆ ಪೋಸ್ ನೀಡಿದರು. ನಂತರ ರಾಜ್ಯಪಾಲರು ಉಪಹಾರ ಕೂಟದಲ್ಲಿ ಭಾಗವಹಿಸಿದ್ದರು.ಕಾರ್ಯಕ್ರಮದಲ್ಲಿ ರಾಷ್ಟ್ರೀಯ ಗೀತೆ ವಂದೇ ಮಾತರಂನ ಪೂರ್ಣ ಚರಣಗಳನ್ನು ಹಾಡಲಾಯಿತು. ರಾಷ್ಟ್ರಗೀತೆ ಜನಗಣಮನ ವಾದ್ಯ ನುಡಿಸುವ ಮೂಲಕ ಕಾರ್ಯಕ್ರಮ ಸಮಾರೋಪಗೊಳಿಸಲಾಯಿತು. ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಕಾರ್ಯಕ್ರಮ ನಿರೂಪಿಸಿದರು. ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್, ಸಂಪುಟದ ಸಚಿವರು, ವಿರೋಧ ಪಕ್ಷ ನಾಯಕರಾದ ಆರ್. ಅಶೋಕ್, ಛಲವಾದಿ ನಾರಾಯಣಸ್ವಾಮಿ, ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ, ಶಾಸಕರು ಪ್ರಮಾಣ ವಚನ ಸ್ವೀಕಾರ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದರು. ಮೈಸೂರು ರಾಜ್ಯದಲ್ಲಿ ಆರು ಹಾಗೂ ಏಕೀಕರಣ ಮತ್ತು ಮರು ನಾಮಕರಣದ ಬಳಿಕ ರಚನೆಯಾದ ಕರ್ನಾಟಕ ರಾಜ್ಯದಲ್ಲಿ 16 ರಾಜ್ಯಪಾಲರು ಕೆಲಸ ನಿರ್ವಹಿಸಿದ್ದಾರೆ. ಈವರೆಗೆ ಒಟ್ಟು 21 ರಾಜ್ಯಪಾಲರು ಸೇವೆ ಸಲ್ಲಿಸಿದ್ದು, ಸುಧಾಯಾದವ್ ಅವರು 22ನೇ ರಾಜ್ಯಪಾಲರಾಗಿ ಕಾರ್ಯಾಂಭಿಸಿದ್ದಾರೆ.

ಹಿನ್ನೆಲೆ: ಡಾ. ಸುಧಾ ಯಾದವ್ ಅವರು ಕರ್ನಾಟಕದ 2ನೇ ಮಹಿಳಾ ರಾಜ್ಯಪಾಲರಾಗಿ ಅಧಿಕಾರ ಅಲಂಕರಿಸಿದ್ದು, ಈ ಹಿಂದೆ 1999ರಲ್ಲಿ ವಿ.ಎಸ್.ರಮಾದೇವಿ ಅವರು ರಾಜ್ಯದ ಮೊದಲ ಮಹಿಳಾ ರಾಜ್ಯಪಾಲೆಯಾಗಿ ಸೇವೆ ಸಲ್ಲಿಸಿದ್ದರು. ಸುಧಾ ಯಾದವ್ ಅವರ ಪತಿ ಸುಖಬೀರ್ ಸಿಂಗ್ ಯಾದವ್ ಅವರು ಗಡಿ ಭದ್ರತಾ ಪಡೆಯ (ಬಿ ಎಸ್ ಎಫ್) ಉಪ ಕಮಾಂಡೆಂಟ್ ಆಗಿದ್ದು, 1999ರ ಕಾರ್ಗಿಲ್ ಯುದ್ಧದಲ್ಲಿ ಪಾಕಿಸ್ತಾನಿ ಪಡೆಗಳ ಫಿರಂಗಿ ದಾಳಿಗೆ ಎದುರಾಗಿ ಹೋರಾಡಿ ಹುತಾತ್ಮರಾಗಿದ್ದರು. ಅವರಿಗೆ ಮರಣೋತ್ತರವಾಗಿ ಸೇನಾ ಪದಕ ನೀಡಿ ಗೌರವಿಸಲಾಗಿತ್ತು.

ಉನ್ನತ ಶಿಕ್ಷಣ ಹಾಗೂ ಸಾಧನೆ: ಸುಧಾ ಯಾದವ್ ಅವರು ಐಐಟಿ ರೂರ್ಕಿಯಲ್ಲಿ ರಸಾಯನಶಾಸ್ತ್ರ ವಿಷಯದಲ್ಲಿ ಎಂ.ಎಸ್ಸಿ ಮುಗಿಸಿ ಚಿನ್ನದ ಪದಕ ಗಳಿಸಿದ್ದು, ಪಿಎಚ್ ಪದವೀಧರೆಯಾಗಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರ ಪ್ರೇರಣೆಯಿಂದ ರಾಜಕೀಯ ಪ್ರವೇಶಿಸಿದ ಇವರು, 1999 ರಿಂದ 2004 ರವರೆಗೆ ಹರ್ಯಾಣದ ಮಹೇಂದ್ರಗಢ ಲೋಕಸಭಾ ಕ್ಷೇತ್ರದ ಸಂಸದೆಯಾಗಿ ಸೇವೆ ಸಲ್ಲಿಸಿದ್ದಾರೆ. ಬಿಜೆಪಿ ಸಂಸದೀಯ ಮಂಡಳಿಗೆ ಆಯ್ಕೆಯಾದ 2ನೇ ಮಹಿಳೆ (ಸುಷ್ಮಾ ಸ್ವರಾಜ್ ಅವರ ನಂತರ) ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ. ಜೊತೆಗೆ ಬಿಜೆಪಿ ಒಬಿಸಿ ಮೋರ್ಚಾದ ರಾಷ್ಟ್ರೀಯ ಉಸ್ತುವಾರಿಯಾಗಿ ಹಾಗೂ ಕೇಂದ್ರ ಹಿಂದುಳಿದ ವರ್ಗಗಳ ರಾಷ್ಟ್ರೀಯ ಆಯೋಗದ ಸದಸ್ಯೆಯಾಗಿಯೂ ಕಾರ್ಯನಿರ್ವಹಿಸಿದ್ದಾರೆ

ಮಹಿಳಾ ಕಬಡ್ಡಿ ಪಂದ್ಯಾವಳಿಯಲ್ಲಿ ರಾಜ್ಯಮಟ್ಟಕ್ಕೆ ಆಯ್ಕೆಯಾದ ಸರ್ಕಾರಿ ಆದರ್ಶ ವಿದ್ಯಾಲಯ, ಅರಕೇರ ತಂಡ



ನೈಜ್ಯ ದೇಸೆ ನ್ಯೂಸ್

ಅರಕೇರ: ಸರ್ಕಾರಿ ಆದರ್ಶ ವಿದ್ಯಾಲಯ, ಅರಕೇರ ಶಾಲೆಯ ಬಾಲಕಿಯರ ಕಬಡ್ಡಿ ತಂಡವು ಕಲಬುರಗಿ ವಿಭಾಗಮಟ್ಟದ ಕಬಡ್ಡಿ ಪಂದ್ಯಾವಳಿಯಲ್ಲಿ ಪ್ರಥಮ ಸ್ಥಾನ ಪಡೆದು ರಾಜ್ಯಮಟ್ಟದ ಪಂದ್ಯಾವಳಿಗೆ ಆಯ್ಕೆಯಾಗುವ ಮೂಲಕ ಶಾಲೆಗೆ ಕೀರ್ತಿ ತಂದಿದೆ. ಬಳ್ಳಾರಿಯ ಕಂಟೋನ್ಮೆಂಟ್‌ನಲ್ಲಿರುವ ನಂದಿ ಪ್ರೌಢಶಾಲೆಯಲ್ಲಿ ಆಯೋಜಿಸಲಾಗಿದ್ದ ಪ್ರಾಥಮಿಕ ಮತ್ತು ಪ್ರೌಢಶಾಲಾ ವಿಭಾಗದ ಬಾಲಕ ಹಾಗೂ ಬಾಲಕಿಯರ ಕಲಬುರಗಿ ವಿಭಾಗಮಟ್ಟದ ಕ್ರೀಡಾಕೂಟದಲ್ಲಿ ಅರಕೇರ ಸರ್ಕಾರಿ ಆದರ್ಶ ವಿದ್ಯಾಲಯದ ಬಾಲಕಿಂ-ುರ ಕಬಡ್ಡಿ ತಂಡವು ಭಾಗವಹಿಸಿ ಅತ್ಯುತ್ತಮ ಪ್ರದರ್ಶನ ನೀಡಿತು. ಪಂದ್ಯಾವಳಿಯಲ್ಲಿ ಎದುರಾಳಿ ತಂಡಗಳ ವಿರುದ್ಧ ಕ್ರೀಡಾ ಕೌಶಲ್ಯ, ಸಂಘಟಿ-ತ ಆಟ, ಸಮಯಪ್ರಜ್ಞೆ, ಧೈರ್ಯ ಹಾಗೂ ತಂಡದ ಒಗ್ಗಟ್ಟನ್ನು ಪ್ರದರ್ಶಿಸಿದ ವಿದ್ಯಾರ್ಥಿನಿಯರು ಪ್ರಥಮ ಸ್ಥಾನವನ್ನು ತಮ್ಮದಾಗಿಸಿಕೊಂಡರು. ಈ ಸಾಧನೆಯೊಂದಿಗೆ ರಾಜ್ಯಮಟ್ಟದ ಕಬಡ್ಡಿ ಪಂದ್ಯಾವಳಿಗೆ ಆಯ್ಕೆಯಾಗಿರುವುದು ಶಾಲೆಯ ಕ್ರೀಡಾ ಕ್ಷೇತ್ರದ ಗಮನಾರ್ಹ ಸಾಧನೆಯಾಗಿದೆ.

ವಿದ್ಯಾರ್ಥಿನಿಯರ ಈ ಯಶಸ್ಸಿಗೆ ಶಾಲೆಯ ಪ್ರಾಂಶುಪಾಲರು ಹಾಗೂ ಸಮಸ್ತ ಶಿಕ್ಷಕ ವೃಂದದವರು ಹರ್ಷ ವ್ಯಕ್ತಪಡಿಸಿ, ತಂಡದ ಎಲ್ಲಾ ವಿದ್ಯಾರ್ಥಿನಿಯರಿಗೆ ಅಭಿನಂದನೆ ಸಲ್ಲಿಸಿದ್ದಾರೆ. ಕ್ರೀಡೆಯು ವಿದ್ಯಾರ್ಥಿಗಳ ದೈಹಿಕ ಸಾಮರ್ಥ್ಯವನ್ನು

2ನೇ ಪುಟಕ್ಕೆ

ಕಂಪ್ಲಿ: ನಂ.10 ಮುದ್ದಾಪುರ-ರಾಮಸಾಗರ ಕ್ರಾಸ್ ರಸ್ತೆಗೆ ಬಾಗಿದ ಮುಳ್ಳುಕಂಟಿ ತೆರವಿಗೆ ಆಗ್ರಹ, ಅರಣ್ಯ ಇಲಾಖೆ ಭರವಸೆ

ನೈಜ್ಯ ದೇಸೆ ನ್ಯೂಸ್

ಬಳ್ಳಾರಿ / ಕಂಪ್ಲಿ: ತಾಲೂಕಿನ ನಂ.10 ಮುದ್ದಾಪುರದಿಂದ ರಾಮಸಾಗರ ಕ್ರಾಸ್‌ವರೆಗಿನ ಮುಖ್ಯರಸ್ತೆಯ ಇಕ್ಕೆಲಗಳಲ್ಲಿ ಬೆಳೆದುನಿಂತ ದೊಡ್ಡ ಗಿಡ ಹಾಗೂ ಮುಳ್ಳುಕಂಟಿಗಳಿಂದ ಬಸ್ ಮತ್ತು ವಾಹನ ಸಂಚಾರಕ್ಕೆ ತೀವ್ರ ಅಡಚಣೆ ಉಂಟಾಗಿದ್ದು, ಸವಾರರು ಜೀವಭಯದಲ್ಲಿ ಓಡಾಡುವಂತಾಗಿದೆ.

ಮುದ್ದಾಪುರ-ರಾಮಸಾಗರ ಹಾಗೂ ಕಂಪ್ಲಿ ಮಾರ್ಗವಾಗಿ ನಿತ್ಯ ನೂರಾರು ಸರ್ಕಾರಿ ಬಸ್‌ಗಳು, ಆಟೋಗಳು ಮತ್ತು ಶಾಲಾ-ಕಾಲೇಜು



ವಾಹನಗಳು ಈ ರಸ್ತೆಯಲ್ಲಿ ಸಂಚ-ರಿಸುತ್ತವೆ. ಕಳೆದ ನಾಲ್ಕೈದು ತಿಂಗಳಿಂದ ರಸ್ತೆಗೆ ಚಾಚಿಕೊಂಡಿರುವ ಮರಗಿಡಗಳಿಂದ ಎದುರಿನ ವಾಹನಗಳು ಕಾಣದಾಗಿ, ರಾತ್ರಿ ವೇಳೆ ದಾರಿ ಅರಿಯಲಾಗದೆ ಸವಾರರು ಪರದಾಡುತ್ತಿದ್ದಾರೆ. ಬಸ್‌ಗಳು ಬೈಪಾಸ್ ಮೂಲಕ ಸುತ್ತಿಹೋಗುತ್ತಿರುವುದ-ರಿಂದ ವಿದ್ಯಾರ್ಥಿಗಳು, ವೃದ್ಧರು ಮತ್ತು ಮಹಿಳೆಯರು ತೊಂದರೆ ಅನುಭವಿಸುತ್ತಿದ್ದಾರೆ.

ರೈತರಾದ ಮಮದೇವಪ್ಪ, ಹೆಚ್. ಕುಮಾರಸ್ವಾಮಿ, ವಿ. ಅನಿಲ, ಅವಲಕ್ಕಿ ರಾಘವೇಂದ್ರ, ಶಿವು ಮತ್ತು ಜಡೆ ಮಹದೇವಪ್ಪ ಅವರ ಒತ್ತಾಯದ ಮೇರೆಗೆ ಅರಣ್ಯ ಇಲಾಖೆ ಅಧಿಕಾರಿ ವಿರೇಶ ಹಾಗೂ ಸಿಬ್ಬಂದಿ ನಾಗರಾಜ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಲೋಕೋಪಯೋಗಿ ಇಲಾಖೆ (ಪಿಡಬ್ಲ್ಯೂಡಿ) ಎಇ ಮಂಜುನಾಥ ಮತ್ತು ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಚರ್ಚಿಸಿ ಶೀಘ್ರವೇ ಕಂಟಿ ತೆರವುಗೊಳಿಸಿ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡುವುದಾಗಿ ಅಧಿಕಾರಿಗಳು ಭರವಸೆ ನೀಡಿದ್ದಾರೆ.

ಹಿರೇಮನ್ನಾಪುರಕ್ಕೆ ಚಳಿಗೇರಿಯ ವೀರಸಂಗಮೇಶ್ವರ ಶಿವಾಚಾರ್ಯರ ಭೇಟಿ

ಜಾತ್ರಾ ಮಹೋತ್ಸವ ಹಾಗೂ ನೂತನ ರಥೋತ್ಸವಕ್ಕೆ ಭಕ್ತರಿಗೆ ಆಹ್ವಾನ

ನೈಜ್ಯ ದೇಸೆ ನ್ಯೂಸ್

ಹಿರೇಮನ್ನಾಪುರ: ಚಳಿಗೇರಿ ಗ್ರಾಮದ ಶ್ರೀ ಷ.ಬ್ರ. ವೀರಸಂಗಮೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು ಹಿರೇಮನ್ನಾಪುರ ಗ್ರಾಮಕ್ಕೆ ಆಗಮಿಸಿ, ಶ್ರೀ ಷ.ಬ್ರ. ವೀರೂಪಾಕ್ಷಲಿಂಗ ಶಿವಾಚಾರ್ಯ ಮಹಾಸ್ವಾಮಿಗಳ ಜಾತ್ರಾ ಮಹೋತ್ಸವ ಹಾಗೂ ನೂತನ ರಥೋತ್ಸವದ ಆಮಂತ್ರಣ ಪತ್ರಿಕೆಯನ್ನು ಶ್ರೀ ಗುರು ಶಂಕರಲಿಂಗ ಶಿವಯೋಗಿಗಳ ಮಠಕ್ಕೆ ಹಾಗೂ



ಮನ್ನಾಪುರ ದೈವದವರಿಗೆ ಸಮರ್ಪಿಸಿದರು.

ಈ ಸಂದರ್ಭದಲ್ಲಿ ಜಾತ್ರಾ ಮಹೋತ್ಸವಕ್ಕೆ ಆಗಮಿಸುವಂತೆ ಭಕ್ತ-ರಿಗೆ ಆಹ್ವಾನ ನೀಡಿದ ಪೂಜ್ಯರು, ಹಿರೇಮನ್ನಾಪುರ ಗ್ರಾಮದ ಹಾಗೂ ಶ್ರೀ ಶಂಕರರ ಮಠದ ತಾಯಂದಿರಿಗೆ ಅರಿಶಿನ-ಕುಂಕುಮ ನೀಡಿ ಜಾತ್ರೆಗೆ ಆಹ್ವಾನಿಸಿದರು. "ಅಪ್ಪನ ಜಾತ್ರೆಗೆ ಬನ್ನಿ" ಎಂಬ ಆತ್ಮೀಯ ಕರೆಯೊಂದಿಗೆ ಭಕ್ತರನ್ನು ಆಹ್ವಾನಿಸಿದ ಪೂಜ್ಯರ ಕಾರ್ಯವು ಧಾರ್ಮಿಕ ಸಂಪ್ರದಾಯ ಮತ್ತು ಭಕ್ತಿಭಾವವನ್ನು ಪ್ರತಿಬಿಂಬಿಸಿತು. ಜಾತ್ರಾ ಮಹೋತ್ಸವ ಹಾಗೂ ನೂತನ ರಥ-ೋತ್ಸವದಲ್ಲಿ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ದೇವರ ಕೃಪೆಗೆ ಪಾತ್ರರಾಗಬೇಕೆಂದು ಆಹ್ವಾನಿಸಲಾಯಿತು.

ಬಿಚ್ಚಾಲಿಯಲ್ಲಿ ವಿಶ್ವ ಕೈ ತೊಳೆಯುವ ದಿನಾಚರಣೆ "ಸ್ವಚ್ಛ ಕೈಗಳು ಆರೋಗ್ಯದ ಗುಟ್ಟು"

ನೈಜ್ಯ ದೇಸೆ ನ್ಯೂಸ್

ಬಿಚ್ಚಾಲಿ: ಗ್ರಾಮದ ಬೃಂದಾವನ ಆಹಾರ ಉತ್ಪಾದನಾ ಘಟಕದಲ್ಲಿ ಸ್ವಾಮಿ ವಿವೇಕಾನಂದ ಯೂತ್ ಮೂವ್‌ಮೆಂಟ್, ಲಿಂಡ್ಸ್ಟ್ರೋಮ್ ಹಾಗೂ ಬೃಂದಾವನ ಮಹಿಳಾ ಸ್ವಸಹಾಯ ಸಂಘ, ಬಿಚ್ಚಾಲಿ ಇವರ ಸಹಯೋಗದಲ್ಲಿ ವಿಶ್ವ ಕೈ ತೊಳೆಯುವ ದಿನಾಚರಣೆ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಕಾರ್ಯಕ್ರಮದಲ್ಲಿ ಅತಿಥಿಗಳಾಗಿ ಭಾಗವಹಿಸಿದ್ದ ಮಟಮಾರಿ ಪ್ರಾಥಮಿಕ ಆರೋಗ್ಯ ಕೇಂದ್ರದ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಅರವಿಂದಕುಮಾರ್ ಮಾತನಾಡಿ, ಪ್ರತಿವರ್ಷ ಅಕ್ಟೋಬರ್ 15ರಂದು ವಿಶ್ವ ಕೈ ತೊಳೆಯುವ ದಿನವನ್ನು ಆಚರಿಸಲಾಗುತ್ತದೆ. 2026ರ ಘೋಷವಾಕ್ಯ *"ಃಜ ಚಿ ಊಚಿಟಜತಿಚಿಥುಟಿರ ಊಜಡಿಾ" (ಕೈ ತೊಳೆಯುವ ನಾಯಕರಾಗಿ)* ಎಂಬುದಾಗಿದೆ. ಮನೆ, ಶಾಲೆ, ಕೆಲಸದ ಸ್ಥಳ ಹಾಗೂ ಸಮುದಾಯಗಳಲ್ಲಿ ಸಾಬೂನಿನಿಂದ ಕೈ ತೊಳೆಯುವ ಉತ್ತಮ ಅಭ್ಯಾಸವನ್ನು ಬೆಳೆಸುವುದು ಈ ದಿನಾಚರಣೆಯ ಮುಖ್ಯ ಉದ್ದೇಶವಾಗಿದೆ ಎಂದರು.

ದಿನನಿತ್ಯದ ಕೆಲಸಗಳ ನಂತರ, ಊಟಕ್ಕೆ



ಮುನ್ನ, ಆಹಾರ ತಯಾರಿಸುವಾಗ ಹಾಗೂ ಮಕ್ಕಳ ಆರೈಕೆ ಮಾಡುವ ಸಂದರ್ಭದಲ್ಲಿ ಸಾಬೂನು ಮತ್ತು ನೀರಿನಿಂದ ಸರಿಯಾದ ವಿಧಾನದಲ್ಲಿ ಕೈ ತೊಳೆಯುವ ಅಭ್ಯಾಸ ಬೆಳೆಸಿಕೊಳ್ಳಬೇಕು. ವಿಶೇಷವಾಗಿ ಮಕ್ಕಳಿಗೆ ಬಾಲ್ಯದಿಂದಲೇ ಕೈಗಳ ಸ್ವಚ್ಛತೆಯ ಮಹತ್ವವನ್ನು ಕಲಿಸಬೇಕು. ಸಾಬೂನಿನಿಂದ ಕೈ ತೊಳೆಯುವುದರಿಂದ ಅತಿಸಾರ, ನ್ಯುಮೋನಿಯಾ ಸೇರಿದಂತೆ ವಿವಿಧ ಸಾಂಕ್ರಾಮಿಕ ರೋಗಗಳನ್ನು ಪರಿಣಾಮಕಾರಿಯಾಗಿ ತಡೆಗಟ್ಟಬಹುದು. ಇದು ಕಡಿಮೆ ವೆಚ್ಚದಲ್ಲಿ ಆರೋಗ್ಯವನ್ನು ಕಾಪಾಡಿಕೊಳ್ಳುವ ಅತ್ಯುತ್ತಮ ವಿಧಾನವಾಗಿದೆ ಎಂದು ತಿಳಿಸಿದರು.

ಸ್ವಾಮಿ ವಿವೇಕಾನಂದ ಯೂತ್ ಮೂವ್‌ಮೆಂಟ್ ಸಂಸ್ಥೆಯ ಫಾಚಿಖಊ ಕಾರ್ಯಕ್ರಮದ ಸಂಯೋಜಕ ವಿನಾಯಕ್ ಆರ್. ಮಾತನಾಡಿ, ನೀರು, ನೈರ್ಮಲ್ಯ ಮತ್ತು ಸ್ವಚ್ಛತೆ ಕುರಿತ ಜಾಗೃತಿ ಮೂಡಿಸುವ ಕಾರ್ಯವನ್ನು ಸಂಸ್ಥೆಯು ಕಳೆದ 14 ವರ್ಷಗಳಿಂದ ನಿರಂತರವಾಗಿ ನಡೆಸಿಕೊಂಡು ಬರುತ್ತಿದೆ. ಶಾಲಾ ಮಕ್ಕಳು ಮತ್ತು ಸಮುದಾಯದ ಜನರಲ್ಲಿ ಶುದ್ಧ ಕುಡಿಯುವ ನೀರಿನ ಬಳಕೆ, ಶೌಚಾಲಯದ ಬಳಕೆ, ಗ್ರಾಮ ನೈರ್ಮಲ್ಯ ಹಾಗೂ ಸರಿಯಾದ ಕೈ ತೊಳೆಯುವ ವಿಧಾನಗಳ ಕುರಿತು ಜಾಗೃತಿ ಮೂಡಿಸಲಾಗುತ್ತಿದೆ ಎಂದರು.

ಈ ವರ್ಷದ ವಿಶ್ವ ಕೈ ತೊಳೆಯುವ ದಿನದ ಅಂಗವಾಗಿ ಆಹಾರ ಉತ್ಪಾದನಾ ಘಟಕದಲ್ಲಿ ರೈತರು, ಮಹಿಳೆಯರು ಹಾಗೂ ಸಮುದಾಯದ ಸದಸ್ಯರನ್ನು ಒಳಗೊಂಡು ಕೈ ತೊಳೆಯುವ ಮಹತ್ವದ ಕುರಿತು ಅರಿವು ಮೂಡಿಸಲಾಯಿತು. ವಿವಿಧ ಇಲಾಖೆಗಳ ಸಹಕಾರದೊಂದಿಗೆ ಇಂತಹ ಆರೋಗ್ಯ ಜಾಗೃತಿ ಕಾರ್ಯಕ್ರಮಗಳನ್ನು ನಿರಂತರವಾಗಿ ಆಯೋಜಿಸಲಾಗುತ್ತಿದೆ ಎಂದು ಹೇಳಿದರು.

ಕಾರ್ಯಕ್ರಮದ ಮತ್ತೊಬ್ಬ ಅತಿಥಿ ಗಿಲ್ಲೆಸೂಗೂರು ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಅರುಣ್ ಕುಮಾರ್ ಅವರು ಮಲೇರಿಯಾ, ಡೆಂಗ್ಯೂ ಹಾಗೂ ಕ್ಷಯರೋಗದ ಕುರಿತು ಮಾಹಿತಿ ನೀಡಿದರು. ಉತ್ತಮ ಆರೋಗ್ಯಕರ ಜೀವನಕ್ಕೆ ವೈಯಕ್ತಿಕ ಸ್ವಚ್ಛತೆ ಅತ್ಯಗತ್ಯವಾಗಿದ್ದು, ಪ್ರತಿಯೊಬ್ಬರೂ ಕೈ ತೊಳೆಯುವ ಅಭ್ಯಾಸವನ್ನು ತಮ್ಮ ದೈನಂದಿನ ಜೀವನದ ಭಾಗವಾಗಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಸಾಬೂನು ಮತ್ತು ನೀರನ್ನು ಬಳಸಿ ಕೈ ತೊಳೆಯುವ ಆರು ಹಂತಗಳ ವಿಧಾನವನ್ನು ಪ್ರಾಯೋಗಿಕವಾಗಿ ಪ್ರದರ್ಶಿಸಲಾಯಿತು. ಸಮುದಾಯದ ಸದಸ್ಯರು ಭಾಗವಹಿಸುವ ಮೂಲಕ ಕಾರ್ಯಕ್ರಮವನ್ನು ಪರಿಣಾಮಕಾರಿಯಾಗಿ ನಡೆಸಲಾಯಿತು.

ಕಾರ್ಯಕ್ರಮದಲ್ಲಿ ಸಂಸ್ಥೆಯ ಸಿಬ್ಬಂದಿಗಳಾದ ಕಾವ್ಯ ಲಿಂಗಪ್ಪ, ಈರಣ್ಣ, ಲಿಂಗಪ್ಪ ಕುರ್ಡಿ ಹಾಗೂ ಮಹಿಳಾ ಸ್ವಸಹಾಯ ಸಂಘದ ಸದಸ್ಯರಾದ ಅಶ್ವಿನಿ, ರೇಷ್ಮಾ, ರೆಹೇನಾ, ರಾಧಾ, ಗಂಗಮ್ಮ, ನಾಗವೇಣಿ ಮತ್ತು ರಶೀದಾ ಬೇಗಂ ಉಪಸ್ಥಿತರಿದ್ದರು. ಸ್ವಚ್ಛ ಕೈಗಳು ಆರೋಗ್ಯದ ರಕ್ಷಣೆ; ಸಾಬೂನಿನಿಂದ ಕೈ ತೊಳೆಯುವುದು ಪ್ರತಿಯೊಬ್ಬರ ಜೀವನದ ಉತ್ತಮ ಅಭ್ಯಾಸವಾಗಲಿ ಎಂಬ ಸಂದೇಶದೊಂದಿಗೆ ಕಾರ್ಯಕ್ರಮ ಸಂಪನ್ನಗೊಂಡಿತು.*

ಸಾಹಿತ್ಯ ಸಿಂಚನ

ಹೇಳಲಾಗದ ಮಾತುಗಳು

ಮನದೊಳಗೆ ಸಾವಿರ ಮಾತುಗಳು ಮೂಡಿದವು,
ತುಟಿಯ ಅಂಚಿಗೆ ಬಂದು ಮೌನವಾದವು.
ಹೇಳಬೇಕೆಂದಿದ್ದ ಭಾವನೆಗಳು ಎದೆಯಲ್ಲೇ
ಉಳಿದವು,
ಕಣ್ಣಂಚಿನ ಹನಿಗಳಾಗಿ ಹೊರಬಂದವು.

ನಗುವಿನ ಹಿಂದೆ ನೋವೊಂದು ಅಡಗಿದೆ,
ಮೌನದ ಹಿಂದೆ ಕಥೆಯೊಂದು ಉಳಿದಿದೆ.
ಅರ್ಥಮಾಡಿಕೊಳ್ಳುವ ಹೃದಯವೊಂದು ಬೇಕಿದೆ,
ಹೇಳದ ಮಾತುಗಳಿಗೂ ಬೆಲೆಯೊಂದು ಬೇಕಿದೆ.

ಕೆಲವು ಮಾತುಗಳು ಮನದಲ್ಲೇ ಸಾಯುತ್ತವೆ,
ಕೆಲವು ನೆನಪುಗಳು ಕಣ್ಣೀರಾಗಿ ಹರಿಯುತ್ತವೆ.
ಹೇಳಲಾಗದ ಪ್ರೀತಿ ಹೃದಯದಲ್ಲಿ ಉಳಿಯುತ್ತದೆ,
ಕಾಲ ಕಳೆದರೂ ನೆನಪಾಗಿ ಕಾಡುತ್ತದೆ.

ಯಾರಿಗೂ ಹೇಳದ ನೋವಿನ ಪುಟಗಳು,
ಮನದೊಳಗೆ ಬರೆದಿವೆ ಮೌನದ ಸಾಲುಗಳು.
ಕೇಳುವವರಿಲ್ಲದೆ ಭಾವನೆಗಳು ಮೌನವಾಗಿವೆ,
ಅರಿಯುವವರಿಲ್ಲದೆ ಕನಸುಗಳು ಕಳೆದುಹೋಗಿವೆ.

ಒಂದು ದಿನ ಈ ಮೌನಕ್ಕೂ ಮಾತು ಬರಬಹುದು,
ಮರೆತ ಭಾವನೆಗಳಿಗೂ ಜೀವ ಮರಳಬಹುದು.
ಅಲ್ಲಿಯವರೆಗೆ ಮನವೇ ನನ್ನ ಸಂಗಾತಿ,
ಹೇಳಲಾಗದ ಮಾತುಗಳೇ ನನ್ನ ಕವಿತೆ!

ಡಾ. ಚನ್ನಬಸವ ಸ್ವಾಮಿ ಹಿರೇಮಠ
ಕಾರ್ಯಾಧ್ಯಕ್ಷರು ಕಾರುಣ್ಯ ನೆಲೆ ವೃದ್ಧಾಶ್ರಮ ಹಾಗೂ
ವಯಸ್ಕರ ಬುದ್ಧಿಮಾಂದ್ಯ ಆಶ್ರಮ ಸಿಂಧನೂರು

1ನೇ ಪುಟದಿಂದ....

ಹೆಚ್ಚಿಸುವುದರ ಜೊತೆಗೆ ಶಿಸ್ತು, ಆತ್ಮವಿಶ್ವಾಸ, ನಾಯಕತ್ವ ಗುಣ, ಸಮಯಪ್ರಜ್ಞೆ ಹಾಗೂ ತಂಡದೊಂದಿಗೆ ಹೊಂದಾಣಿಕೆಯಿಂದ ಕಾರ್ಯನಿರ್ವಹಿಸುವ ಮನೋಭಾವವನ್ನು ಬೆಳೆಸುತ್ತದೆ. ಇಂತಹ ಕ್ರೀಡಾ ಚಟುವಟಿಕೆಗಳಲ್ಲಿ ಭಾಗವಹಿಸುವುದರಿಂದ ವಿದ್ಯಾರ್ಥಿಗಳಲ್ಲಿ ಅಡಗಿರುವ ಪ್ರತಿಭೆ ಹೊರಹೊಮ್ಮಲು ಸಾಧ್ಯವಾಗುತ್ತದೆ. ಈ ನಿಟ್ಟಿನಲ್ಲಿ ವಿದ್ಯಾರ್ಥಿನಿಯರು ವಿಭಾಗಮಟ್ಟದಲ್ಲಿ ಪ್ರಥಮ ಸ್ಥಾನ ಗಳಿಸಿರುವುದು ಇತರ ವಿದ್ಯಾರ್ಥಿಗಳಿಗೂ ಸ್ಫೂರ್ತಿದಾಯಕವಾಗಿದೆ.

ಮುಂದಿನ ರಾಜ್ಯಮಟ್ಟದ ಪಂದ್ಯಾವಳಿಯಲ್ಲಿಯೂ ಇದೇ ರೀತಿಯ ಉತ್ತಮ ಪ್ರದರ್ಶನ ನೀಡಿ ಜಯಗಳಿಸುವ ಮೂಲಕ ಶಾಲೆ ಹಾಗೂ ಜಿಲ್ಲೆಯ ಕೀರ್ತಿಯನ್ನು ಹೆಚ್ಚಿಸಲಿ ಎಂದು ಶಿಕ್ಷಕರು ಶುಭ ಹಾರೈಸಿದ್ದಾರೆ.

ಪಂದ್ಯಾವಳಿಯ ಸಂದರ್ಭದಲ್ಲಿ ದೈಹಿಕ ಶಿಕ್ಷಣ ಶಿಕ್ಷಕರಾದ ಗಲಗದ ಶಂಕರಗೌಡ ಪಾಟೀಲ್ ಹಾಗೂ ಗಲಗದ ಪಂಪನಗೌಡ ಅವರು ವಿದ್ಯಾರ್ಥಿನಿಯರೊಂದಿಗೆ ಹಾಜರಿದ್ದು, ತಂಡಕ್ಕೆ ಅಗತ್ಯವಾದ ಮಾರ್ಗದರ್ಶನ ಮತ್ತು ಪ್ರೋತ್ಸಾಹ ನೀಡಿದರು. ವಿದ್ಯಾರ್ಥಿನಿಯರ ನಿರಂತರ ಅಭ್ಯಾಸ, ಪರಿಶ್ರಮ ಹಾಗೂ ಕ್ರೀಡೆಯ ಮೇಲಿನ ಆಸಕ್ತಿಗೆ ಶಿಕ್ಷಕರ ಮಾರ್ಗದರ್ಶನವೂ ಪೂರಕವಾಗಿದ್ದು, ತಂಡದ ಸಾಧನೆಗೆ ಎಲ್ಲರಿಂದ ಮೆಚ್ಚುಗೆ ವ್ಯಕ್ತವಾಗಿದೆ. ಬಾಲಕಿಂ–ಮರ ಈ ಸಾಧನೆಯಿಂದ ಶಾಲೆಯ ಶಿಕ್ಷಕರು, ಪೋಷಕರು ಹಾಗೂ ಅರಕೇರ ಗ್ರಾಮದ ಜನರಲ್ಲಿ ಸಂತಸ ಮನೆಮಾಡಿದೆ. ರಾಜ್ಯಮಟ್ಟಕ್ಕೆ ಆಯ್ಕೆಯಾಗಿರುವ ಸರ್ಕಾರಿ ಆದರ್ಶ ವಿದ್ಯಾಲಯ, ಅರಕೇರ ಶಾಲೆಯ ಬಾಲಕಿಯರ ಕಬಡ್ಡಿ ತಂಡವು ಮುಂದಿನ ಸ್ಪರ್ಧೆಯಲ್ಲಿಯೂ ಉತ್ತಮ ಪ್ರದರ್ಶನ ನೀಡಿ ಮತ್ತಷ್ಟು ಯಶಸ್ಸು ಗಳಿಸಲಿ ಎಂಬುದು ಎಲ್ಲರ ಆಶಯವಾಗಿದೆ.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು
ತಪ್ಪದೆ ಓದಿರಿ.

ವಕ್ಫ್ ಆಸ್ತಿಗಳ ನಿರ್ವಹಣೆ, ಮಸ್ಜಿದ್ ಕಮಿಟಿಗಳ ಆಡಳಿತದ ಸಮಗ್ರ ತನಿಖೆಗೆ ಅಂಜುಮನ್ ಲಿಂಗಸೂಗೂರು ತಾಲೂಕು ಕಮಿಟಿ ಆಗ್ರಹ

ಅಂಜುಮನ್ ಕಮಿಟಿಯ ಸಾಮಾಜಿಕ ಕಳಕಳಿಯ ಎಲಾನ್‌ಗಳನ್ನು ತಡೆಹಿಡಿಯುತ್ತಿರುವ ಆರೋಪ: ಜಿಲ್ಲಾ ವಕ್ಫ್ ಬೋರ್ಡ್‌ಗೆ ದೂರು ಸಲ್ಲಿಕೆ

❑ ನೈಜ್ಯ ದೆಸೆ ನ್ಯೂಸ್



ಲಿಂಗಸೂಗೂರು: ಲಿಂಗಸೂಗೂರು ಪುರಸಭೆ ವ್ಯಾಪ್ತಿಯ ಮಸ್ಜಿದ್ ಕಮಿಟಿಗಳ ಆಡಳಿತ, ಆರ್ಥಿಕ ವ್ಯವಹಾರಗಳು ಹಾಗೂ ಲಿಂಗಸೂಗೂರು ತಾಲೂಕಿನಲ್ಲಿರುವ ವಕ್ಫ್ ಆಸ್ತಿಗಳ ನಿರ್ವಹಣೆ ಮತ್ತು ಸಂರಕ್ಷಣೆಯ ಕುರಿತು ಸಮಗ್ರ ತನಿಖೆ ನಡೆಸಿ, ತಪ್ಪಿತಸ್ಥರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳುವಂತೆ ಆಗ್ರಹಿಸಿ ಅಂಜುಮನ್–ಎ–ಮುಸ್ಲಿಮೀನ್ ಲಿಂಗಸೂಗೂರು ತಾಲೂಕು ಕಮಿಟಿಯ ವತಿಯಿಂದ ರಾಯಚೂರು ಜಿಲ್ಲಾ ವಕ್ಫ್ ಬೋರ್ಡ್ ಕಚೇರಿಗೆ ದೂರು ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಅಂಜುಮನ್ ಕಮಿಟಿಯ ಗೌರವಾಧ್ಯಕ್ಷರಾದ ಅನ್ಸರುದ್ದಿನ್ ಮಾತನಾಡಿ, ವಕ್ಫ್ ಮಂಡಳಿಯ ವ್ಯಾಪ್ತಿಗೆ ಒಳಪಡುವ ವಿವಿಧ ಮಸ್ಜಿದ್ ಕಮಿಟಿಗಳ ಕಾರ್ಯವೈಖರಿ, ಕಮಿಟಿಗಳ ರಚನೆ, ಲೆಕ್ಕಪತ್ರಗಳ ನಿರ್ವಹಣೆ ಹಾಗೂ ವಕ್ಫ್ ಆಸ್ತಿಗಳ ಬಳಕೆ, ನಿರ್ವಹಣೆ ಮತ್ತು ಸಂರಕ್ಷಣೆಯ ಕುರಿತು ಸಮಗ್ರ ಪರಿಶೀಲನೆ ನಡೆಸುವುದು ಸಾರ್ವಜನಿಕ ಹಿತದೃಷ್ಟಿಯಿಂದ ಅತ್ಯಂತ ಅಗತ್ಯವಾಗಿದೆ ಎಂದು ತಿಳಿಸಿದರು.

ಅಲ್ಲದೆ, ಅಂಜುಮನ್ ಕಮಿಟಿಯ ವತಿಯಿಂದಸಾಮಾಜಿಕ ಕಳಕಳಿಯುಳ್ಳ ಎಲಾನ್‌ಗಳನ್ನು (ಘೋಷಣೆಗಳನ್ನು) ದುರುದ್ದೇಶಪೂರ್ವಕವಾಗಿ ತಡೆಹಿಡಿಯುತ್ತಿರುವ ಬಗ್ಗೆಯೂ ಸಮಗ್ರ ತನಿಖೆ ನಡೆಸಬೇಕು ಎಂದು ಒತ್ತಾಯಿಸಿದರು. ತನಿಖೆಯ ಸಂದರ್ಭದಲ್ಲಿ ಯಾವುದೇ ಅಕ್ರಮ ಅಥ–ವಾ ನಿಯಮ ಉಲ್ಲಂಘನೆಗಳು ದೃಢಪಟ್ಟಲ್ಲಿ ಸಂಬಂಧಪಟ್ಟವರ ವಿರುದ್ಧ ಅನ್ವಯಿಸುವ ಕಾನೂನು ಮತ್ತು ನಿಯಮಗಳ ಪ್ರಕಾರ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಅಂಜುಮನ್ ಲಿಂಗಸೂಗೂರು ತಾಲೂಕು ಕಮಿಟಿಯ ಅಧ್ಯಕ್ಷರಾದ ಹುಸೇನ್ ಭಾಷಾ, ಪ್ರಧಾನ ಕಾರ್ಯದರ್ಶಿ ಸಲೀಂ ಪಾಷಾ, ನಗರ ಘಟಕದ ಅಧ್ಯಕ್ಷರಾದ ಮೊಹಮ್ಮದ್ ರಫಿ, ಸದಸ್ಯರಾದ ಕಲೀಂ ಭಾಯಿ, ವಸಿಂ ಪಾಷಾ, ಶೇಖ್ ಅಲಿ, ರಜ್ಜಬ್, ರಫಿ, ಆದಿಲ್, ಅಜ್ಜು ಹಟ್ಟಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

ರಾಯಚೂರು ನಗರದಲ್ಲಿ 28 ನೇ ವಾರ್ಡ್ ನಲ್ಲಿ ಕುಡಿಯುವ ನೀರು ಮತ್ತು ಬೀದಿ ದೀಪಗಳ ಸಮಸ್ಯೆ: ಅಧಿಕಾರಿಗಳಿಗೆ ಸಾರ್ವಜನಿಕರ ಮನವಿ



❑ ನೈಜ್ಯ ದೆಸೆ ನ್ಯೂಸ್

=ರಾಯಚೂರು: ನಗರದ 28 ನೇ ವಾರ್ಡ್‌ಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಹಾಗೂ ಬೀದಿ ದೀಪಗಳ ನಿರ್ವಹಣೆಯಲ್ಲಿನ ಲೋಪಗಳನ್ನು ಸರಿಪಡಿಸುವಂತೆ ಆಗ್ರಹಿಸಿ, ಕರ್ನಾಟಕ ದಲಿತ ಸಂಘಗಳ ಒಕ್ಕೂಟ ಹಾಗೂ ಸಾರ್ವಜನಿಕರ ಪರವಾಗಿ ಮಹಾನಗರ ಪಾಲಿಕೆ ಆಯುಕ್ತರಿಗೆ ಮನವಿ ಸಲ್ಲಿಸಲಾಗಿದೆ.

ರಾಯಚೂರು ನಗರದ ಸರ್ವೆ ನಂ. 137ರ ಬಳಿಯ ಹಳೆ ಆಸ್ಪತ್ರೆ ಕಾಲೋನಿಯಲ್ಲಿ ಕುಡಿಯುವ ನೀರಿನ ಸಮಸ್ಯೆ ತೀವ್ರವಾಗಿದ್ದು, ನಿವಾಸಿಗಳು ತೊಂದರೆ ಅನುಭವಿಸುತ್ತಿದ್ದಾರೆ. ಸುಮಾರು 250 ಅಡಿ ದೂರದಲ್ಲಿ ನಾಲ್ಕು ಇಂಚಿನ ಮುಖ್ಯ ನೀರಿನ ಪೈಪ್‌ಲೈನ್ ಇದ್ದರೂ, ಮಹಾನಗರ ಪಾಲಿಕೆಯಿಂದ ಎರಡು ಇಂಚಿನ ಪೈಪ್‌ಲೈನ್ ಸಂಪರ್ಕ ಕಲ್ಪಿಸಿರುವುದ–ರಿಂದ ಸಮರ್ಪಕ ನೀರು ಪೂರೈಕೆಯಾಗುತ್ತಿಲ್ಲ ಎಂದು ಮನವಿಯಲ್ಲಿ ಉಲ್ಲೇಖಿಸಲಾಗಿದೆ. ಆದ್ದರಿಂದ ಎರಡು ಇಂಚಿನ ಬೋರ್‌ವೆಲ್ ಪೈಪ್‌ಲೈನ್‌ಗಳನ್ನು ಅಳವಡಿಸುವ ಬದಲು, ಅಗತ್ಯಕ್ಕೆ ಅನುಗುಣವಾಗಿ ಸಮರ್ಪಕ ಪೈಪ್‌ಲೈನ್ ವ್ಯವಸ್ಥೆ ಕಲ್ಪಿಸುವಂತೆ ಒತ್ತಾಯಿಸಲಾಗಿದೆ.

ಇದೇ ವೇಳೆ, ಹಳೆ ಆಸ್ಪತ್ರೆ ಕಾಲೋನಿಯಲ್ಲಿ ಹಲವು ವರ್ಷಗಳಿಂದ ಬೀದಿ ದೀಪಗಳ ಕೊರತೆ ಹಾಗೂ ನಿರ್ವಹಣೆಯ ಸಮಸ್ಯೆ ಮುಂದುವರಿದಿದೆ. ಬೀದಿ ದೀಪಗಳು ಸರಿಯಾಗಿ ಕಾರ್ಯನಿರ್ವಹಿಸದ ಕಾರಣ ರಾತ್ರಿ ವೇಳೆ ಸಾರ್ವಜನಿಕರು, ಮಹಿಳೆಯರು ಮತ್ತು ಮಕ್ಕಳು ಸಂಚರಿಸಲು ತೊಂದರೆಯಾಗುತ್ತಿದೆ. ಕತ್ತಲಿನಿಂದಾಗಿ ಸುರಕ್ಷತೆಯ ಆತಂಕವೂ ಎದುರಾಗಿದೆ ಎಂದು ಮನವಿಯಲ್ಲಿ ತಿಳಿಸಲಾಗಿದೆ.

ಆದ್ದರಿಂದ ಸಂಬಂಧಪಟ್ಟ ಅಧಿಕಾ–ರಿಗಳು ಸ್ಥಳ ಪರಿಶೀಲನೆ ನಡೆಸಿ, ಕುಡಿಯುವ ನೀರಿನ ಸಮಸ್ಯೆಯನ್ನು ಶಾಶ್ವತವಾಗಿ ಪರಿಹ–ರಿಸುವುದರ ಜೊತೆಗೆ ಬೀದಿ ದೀಪಗಳನ್ನು ಅಳವಡಿಸಿ, ಸಾರ್ವಜನಿಕರಿಗೆ ಅಗತ್ಯ ಮೂಲಸೌಕರ್ಯ ಒದಗಿಸಬೇಕು ಎಂದು ಮನವಿದಾರರು ಆಗ್ರಹಿಸಿದ್ದಾರೆ. ಈ ಸಂದರ್ಭದಲ್ಲಿ ಎಲ್.ವಿ. ಸುರೇಶ್ ರಾಜ್ಯಾಧ್ಯಕ್ಷರು, ಹನುಮೇಶ ಆರೋಲಿ ಕಲಾ ಮಂ: ರಾ. ಸಂಚಾಲಕರು, ಶಿವಾನಂದ ಬೇರಿ ರಾ.ಸಂ.ಕಾರ್ಯದರ್ಶಿ, ರಾಮಕೃಷ್ಣ ಪ್ರಸಾದ ಜಿಲ್ಲಾ ಸಂಚಾಲಕರು, ಗೌರವಾಧ್ಯಕ್ಷರು ಜಲಾಲ್, ಅನ್ವರ್ ಅಧ್ಯಕ್ಷರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು... ಸಾರ್ವಜನಿಕರ ಸಮಸ್ಯೆಗಳಿಗೆ ತಕ್ಷಣ ಸ್ಪಂದಿಸಿ ಸೂಕ್ತ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಮನವಿ ಮಾಡಲಾಗಿದೆ.

ಭೀಮ್ ಆರ್ಮಿ ರಾಯಚೂರು ಜಿಲ್ಲಾಧ್ಯಕ್ಷರಾಗಿ ವಿಶ್ವನಾಥ ಬಲ್ಲಿದೇವ್ ನೇಮಕ

ಬಹುಜನ ಹಿತಾಯ, ಬಹುಜನ ಸುಖಾಯ ತತ್ವದಡಿ ಸಂಘಟನೆ ಬಲವರ್ಧನೆಗೆ ಆದ್ಯತೆ

❑ ನೈಜ್ಯ ದೆಸೆ ನ್ಯೂಸ್

ರಾಯಚೂರು: ಬಾಬಾಸಾಹೇಬ್ ಡಾ. ಬಿ.ಆರ್. ಅಂಬೇಡ್ಕರ್ ಹಾಗೂ ದಾದಾಸಾಹೇಬ್ ಕಾನ್ಶಿರಾಮ್ ಅವರ ವಿಚಾರಧಾರೆ ಮತ್ತು 'ಬಹುಜನ ಹಿತಾಯ, ಬಹುಜನ ಸುಖಾಯ' ಎಂಬ ತತ್ವವನ್ನು ಮುಂದುವರಿಸುವ ಉದ್ದೇಶದಿಂದ ಭೀಮ್ ಆರ್ಮಿ (ಭಾರತ್ ಏಕತಾ ಮಿಷನ್) ಸಂಘಟನೆಯ ರಾಯಚೂರು ಜಿಲ್ಲಾಧ್ಯಕ್ಷರಾಗಿ ವಿಶ್ವನಾಥ ಬಲ್ಲಿದೇವ್ ಅವರನ್ನು ನೇಮಕ ಮಾಡಲಾಗಿದೆ.

ಭೀಮ್ ಆರ್ಮಿ ಕರ್ನಾಟಕ ರಾಜ್ಯ ಘಟಕದ ರಾಜ್ಯಾಧ್ಯಕ್ಷ ರಘು ಸಿ.ಕೆ. ಅವರು



2026ರ ಅಕ್ಟೋಬರ್ 15ರಂದು ನೇಮಕಾತಿ ಪತ್ರ ನೀಡಿ ಈ ನೇಮಕವನ್ನು ಪ್ರಕಟಿಸಿದ್ದಾರೆ. ಜಿಲ್ಲೆಯಲ್ಲಿ ಸಂಘಟನೆಯ ಕಾರ್ಯಚಟುವಟಿಕೆಗಳನ್ನು ಪರಿಣಾಮಕಾ–ರಿಯಾಗಿ ವಿಸ್ತರಿಸುವ ಜವಾಬ್ದಾರಿಯನ್ನು ವಿಶ್ವನಾಥ ಬಲ್ಲಿದೇವ್ ಅವರಿಗೆ ವಹಿಸಲಾಗಿದೆ.

ಸಂಘಟನೆಯ ತತ್ವ, ಸಿದ್ಧಾಂತ ಹಾಗೂ ಉದ್ದೇಶಗಳಿಗೆ ಬದ್ಧರಾಗಿ ಕಾರ್ಯನಿರ್ವಹಿಸುವಂತೆ ನೇಮಕಾತಿ ಪತ್ರದಲ್ಲಿ ಸೂಚಿಸಲಾಗಿದೆ. ಸಮಾಜದ ಹಿಂದುಳಿದ, ಶೋಷಿತ ಹಾಗೂ ದುರ್ಬಲ ವರ್ಗಗಳ ಹಕ್ಕುಗಳಿಗಾಗಿ ಧ್ವನಿ ಎತ್ತುವುದು, ಸಾಮಾಜಿಕ ನ್ಯಾಯ ಮತ್ತು ಸಮಾನತೆಯ ಆಶಯಗಳನ್ನು ಜನರಲ್ಲಿ ಮೂಡಿಸುವುದು ಹಾಗೂ ಸಂಘಟನೆಯನ್ನು ತಳಮಟ್ಟದಿಂದ ಬಲಪಡಿಸುವುದು ಅವರ ಪ್ರಮುಖ ಜವಾಬ್ದಾರಿಗಳಾಗಿವೆ.

ರಾಜ್ಯ ಮತ್ತು ರಾಷ್ಟ್ರಮಟ್ಟದಲ್ಲಿ ಸಂಘಟನೆ ಹೊಂದಿರುವ ಆಶಯಗಳನ್ನು ಜಿಲ್ಲೆಯಲ್ಲಿ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ಮೂಲಕ ಬಹುಜನ ಸಮಾಜದ ಏಳಿಗೆಗೆ ಶ್ರಮಿಸಬೇಕು ಎಂದು ಸೂಚಿಸಲಾಗಿದೆ.

ವಿಶ್ವನಾಥ ಬಲ್ಲಿದೇವ್ ಅವರ ನೇಮಕದಿಂದ ರಾಯಚೂರು ಜಿಲ್ಲೆಯಲ್ಲಿ ಭೀಮ್ ಆರ್ಮಿ ಸಂಘಟನೆಯ ಚಟುವಟಿಕೆಗಳಿಗೆ ಮತ್ತಷ್ಟು ಬಲ ದೊರೆಯುವ ನಿರೀಕ್ಷೆಯಿದೆ.

ಬಹುಜನ ಹಿತಾಯ, ಬಹುಜನ ಸುಖಾಯ ತತ್ವದಡಿ ಸಂಘಟನೆ ಬಲವರ್ಧನೆಗೆ ಆದ್ಯತೆ

❑ ನೈಜ್ಯ ದೆಸೆ ನ್ಯೂಸ್

ಮಳೆ ಕೊರತೆಯಿಂದ ಐದು ಎಕರೆ ಕೊರಲೆ ಬೆಳೆ ನಾಶ ಬರ ಪರಿಹಾರ ಕಾಗದಕ್ಕೆ ಸೀಮಿತ ರೈತರ ಖಾತೆಗೆ ಹಣ ಜಮೆಯಾಗಿಲ್ಲ ಸಿರಿಧಾನ್ಯ ಬೆಳೆಗಾರರಿಗೆ ತಕ್ಷಣ ಪ್ರೋತ್ಸಾಹಧನ ನೀಡಲು ಈರಣ್ಣ ಜಿಗೇರಿ ಒತ್ತಾಯ



ಕುಷ್ಟಗಿ: ತಾಲೂಕಿನ ಕಡೇಕೊಪ್ಪ ಗ್ರಾಮದ ರೈತ ಈರಣ್ಣ ಜಿಗೇರಿ ಅವರು ತಮ್ಮ ಐದು ಎಕರೆ ಜಮೀನಿನಲ್ಲಿ ಸಿರಿಧಾನ್ಯ ಬೆಳೆಯಾದ ಕೊರಲೆ ಬೆಳೆದಿದ್ದು, ಈ ವರ್ಷ ಮಳೆಯ ಕೊರತೆಯಿಂದಾಗಿ ಸಂಪೂರ್ಣ ಬೆಳೆ ನಾಶವಾಗಿದೆ. ಇದರಿಂದ ರೈತರು ತೀವ್ರ ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದಾರೆ. ಮಳೆಯ ಅಭಾವದಿಂದ ಬೆಳೆ ಕೈಕೊಟ್ಟಿದ್ದು, ಕೃಷಿಗಾಗಿ ಮಾಡಿದ ಖರ್ಚು ಕೂಡ ಮರಳಿ ಬಾರದ ಪರಿಸ್ಥಿತಿ ನಿರ್ಮಾಣವಾಗಿದೆ. ರೈತರು ಸಾಲ ಮಾಡಿ ಕೃಷಿ ಚಟುವಟಿಕೆ ನಡೆಸಿದ್ದು, ಬೆಳೆ ನಷ್ಟದಿಂದಾಗಿ ಜೀವನ ನಿರ್ವಹಣೆ ಕಷ್ಟಕರವಾಗಿದೆ.

ಕುಷ್ಟಗಿ ತಾಲೂಕನ್ನು ಬರಪೀಡಿತ ತಾಲೂಕು ಎಂದು ಘೋಷಣೆ ಮಾಡಿದ್ದರೂ, ರೈತರ ಖಾತೆಗಳಿಗೆ ಇದುವರೆಗೆ ಪರಿಹಾರದ ಹಣ ಜಮೆಯಾಗಿಲ್ಲ. ಬರ ಘೋಷಣೆ ಕೇವಲ ಕಾಗದದ ಮೇಲಿದ್ದು, ಸಂಕಷ್ಟದಲ್ಲಿರುವ ರೈತರಿಗೆ ಯಾವುದೇ ನೆರವು ದೊರೆಯುತ್ತಿಲ್ಲ ಎಂದು ರೈತ ಈರಣ್ಣ ಜಿಗೇರಿ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಸಿರಿಧಾನ್ಯ ಬೆಳೆಯಾದ ಕೊರಲೆಗೆ ಸರ್ಕಾರ ವಿಶೇಷ ಪ್ರೋತ್ಸಾಹಧನ ನೀಡಬೇಕು. ಮಳೆಯ ಕೊರತೆಯಿಂದ ಬೆಳೆ ನಷ್ಟ ಅನುಭವಿಸಿರುವ ರೈತರ ಜಮೀನುಗಳಿಗೆ ಸೂಕ್ತ ಸಮೀಕ್ಷೆ ನಡೆಸಿ, ಅರ್ಹ ರೈತರಿಗೆ ತಕ್ಷಣ ಬೆಳೆ ಪರಿಹಾರ ಬಿಡುಗಡೆ ಮಾಡಬೇಕು. ಬರಪೀಡಿತ ರೈತರ ನೆರವಿಗೆ ಸರ್ಕಾರ ಕೂಡಲೇ ಧಾವಿಸಬೇಕು ಎಂದು ಅವರು ಒತ್ತಾಯಿಸಿದ್ದಾರೆ.

ಯಲಗಟ್ಟಾದಲ್ಲಿ ದೌರ್ಜನ್ಯ ಪ್ರಕರಣಗಳ ನಿಯಂತ್ರಣ ಸಭೆ: ಅಕ್ರಮ ಮದ್ಯ ಮಾರಾಟ, ಕುಡಿಯುವ ನೀರಿನ ಸಮಸ್ಯೆ ವಿರುದ್ಧ ಮಹಿಳೆಯರ ಆಕ್ರೋಶ

16–17 ವರ್ಷದ ವಿದ್ಯಾರ್ಥಿಗಳು ಮದ್ಯವ್ಯಸನಕ್ಕೆ ಬಲಿಯಾಗುತ್ತಿದ್ದಾರೆ ಎಂದು ಆತಂಕ; ಅಕ್ರಮ ಮದ್ಯ ಮಾರಾಟದ ವಿರುದ್ಧ ಕಠಿಣ ಕ್ರಮಕ್ಕೆ ತಹಶೀಲ್ದಾರ್ ಸೂಚನೆ

❑ ನೈಜ್ಯ ದೆಸೆ ನ್ಯೂಸ್

ಲಿಂಗಸುಗೂರು: ರಾಯಚೂರು ಜಿಲ್ಲೆಯ ಲಿಂಗಸುಗೂರು ತಾಲೂಕಿನ ರೋಡಬಂಡ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಯಲಗಟ್ಟಾ ಗ್ರಾಮದ ಶ್ರೀ ಮಾರುತೇಶ್ವರ ದೇವಸ್ಥಾನದ ಆವರಣದಲ್ಲಿ ಇತ್ತೀಚೆಗೆ ನಡೆದ ದೌರ್ಜನ್ಯ ಪ್ರಕರಣಗಳ ನಿಯಂತ್ರಣ ಸಭೆಯಲ್ಲಿ ಗ್ರಾಮದ ಮೂಲಭೂತ ಸೌಕರ್ಯಗಳ ಕೊರತೆ ಹಾಗೂ ಅಕ್ರಮ ಮದ್ಯ ಮಾರಾಟದ ವಿರುದ್ಧ ಮಹಿಳೆಯರು ತೀವ್ರ ಆಕ್ರೋಶ ವ್ಯಕ್ತಪಡಿಸಿದರು.



ಗ್ರಾಮದಲ್ಲಿ ಜಲಜೀವನ್ ಮಿಷನ್ (ಜೆಜೆಎಂ) ಯೋಜನೆಯಡಿ ಪೈಪ್‌ಲೈನ್ ಅಳವಡಿಸಿದ್ದರೂ ಸಮರ್ಪಕವಾಗಿ ನೀರು ಪೂರೈಕೆಯಾಗುತ್ತಿಲ್ಲ. ಇದರಿಂದ ಕುಡಿಯುವ ನೀರಿಗಾಗಿ ಗ್ರಾಮಸ್ಥರು ಪರದಾಡುವಂತಾಗಿದೆ ಎಂದು ಮಹಿಳೆಯರು ಅಧಿಕಾರಿಗಳ ಗಮನಕ್ಕೆ ತಂದರು.

ಮೂಲಭೂತ ಸೌಕರ್ಯಗಳ ಕೊರತೆಗೆ ಆಕ್ರೋಶ

ಗ್ರಾಮದ ಪರಿಶಿಷ್ಟ ಜಾತಿ (ಎಸ್‌ಸಿ) ವಾರ್ಡ್ ಹಾಗೂ ಅಂಬೇಡ್ಕರ್ ಸರ್ಕಲ್ ಓಣಿಯಲ್ಲಿ ಸಿಸಿ ರಸ್ತೆ ನಿರ್ಮಿಸಿಲ್ಲ. ಸಮರ್ಪಕ ಚರಂಡಿ ವ್ಯವಸ್ಥೆಯಿಲ್ಲದೆ ಕೊಳಚೆ ನೀರು ಎಲ್ಲೆಂದರಲ್ಲಿ ನಿಂತಿದ್ದು, ವಿದ್ಯುತ್ ದೀಪಗಳ ಕಂಬಗಳ ಕೊರತೆಯಿಂದ ರಾತ್ರಿ ವೇಳೆ ಓಣಿ ಕತ್ತಲಲ್ಲಿ ಮುಳುಗುತ್ತದೆ. ಇದರಿಂದ ಸಾಂಕ್ರಾಮಿಕ ರೋಗಗಳು ಹರಡುವ ಆತಂಕ ಎದುರಾಗಿದೆ ಎಂದು ಗ್ರಾಮಸ್ಥರು ದೂರಿದರು.

ಇದಲ್ಲದೆ, ಗ್ರಾಮದಲ್ಲಿ ಸಾರ್ವಜನಿಕ ಶೌಚಾಲಯ ಹಾಗೂ ಗ್ರಂಥಾಲಯದಂತಹ ಅಗತ್ಯ ಸೌಲಭ್ಯಗಳನ್ನು ಕಲ್ಪಿಸಬೇಕು ಎಂದು ಆಗ್ರಹಿಸಿದರು.

ಅಕ್ರಮ ಮದ್ಯ ಮಾರಾಟದಿಂದ ಯುವಜನತೆ ಹಾದಿ ತಪ್ಪುವ ಆತಂಕ*

ಗ್ರಾಮದಲ್ಲಿ ಅಕ್ರಮವಾಗಿ ಮದ್ಯ ಮಾರಾಟ ನಡೆಯುತ್ತಿದೆ ಎಂದು ಆರೋಪಿಸಿದ ಮಹಿಳೆಯರು, 16?17 ವರ್ಷದ ಅಪ್ರಾಪ್ತ ವಿದ್ಯಾರ್ಥಿಗಳು ಸೇರಿದಂತೆ ಯುವಕರು ಮದ್ಯವ್ಯಸನಕ್ಕೆ ಒಳಗಾಗುತ್ತಿರುವ ಬಗ್ಗೆ ಕಳವಳ ವ್ಯಕ್ತಪಡಿಸಿದರು. ಅಕ್ರಮ ಮದ್ಯ ಮಾರಾಟಕ್ಕೆ ಕಡಿವಾಣ ಹಾಕಿ, ಗ್ರಾಮವನ್ನು ಮದ್ಯಮುಕ್ತಗೊಳಿಸಲು ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಅಧಿಕಾರಿಗಳಿಗೆ ತಹಶೀಲ್ದಾರ್ ಕಟ್ಟುನಿಟ್ಟಿನ ಸೂಚನೆ*

ಮಹಿಳೆಯರ ಅಹವಾಲುಗಳನ್ನು ಗಂಭೀರವಾಗಿ ಪರಿಗಣಿಸಿದ ತಹಶೀಲ್ದಾರ್ ಸತ್ಯಮ್ಮ ಅವರು, ಸಭೆಯಲ್ಲಿ ಉಪಸ್ಥಿತರಿದ್ದ ಅಬಕಾರಿ ಇನ್ಸ್‌ಪೆಕ್ಟರ್ ಲಕ್ಷ್ಮೀದೇವಿ ಹಾಗೂ ಸಿಪಿಐ ಶಿವಾನಂದ ಗಾಣಿಗೇರ್ ಅವರಿಗೆ ಅಕ್ರಮ ಮದ್ಯ ಮಾರಾಟದ ಕು–ರಿತು ತನಿಖೆ ನಡೆಸಿ, ತಪ್ಪಿತಸ್ಥರ ವಿರುದ್ಧ ಎಫ್‌ಐಆರ್ ದಾಖಲಿಸುವುದು ಸೇರಿದಂತೆ ಕಾನೂನುಬದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ಅದೇ ರೀತಿ, ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿ ರವಿಕುಮಾರ್ ಉಪ್ಪಾರ್, ಪಿಡಿಒ ಸುರೇಶ್ ಕುಮಾರ್, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ನಾಗರತ್ನ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಡಾಕ್ಷರಿ, ನಟರಾಜ್, ಗುರುಗುಂಟ ನಾಡ ತಹಶೀಲ್ದಾರ್ ರಾಘವೇಂದ್ರ ಕುಲಕರ್ಣಿ ಹಾಗೂ ಮಹಿಬೂಬ್ ಸಾಬ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳಿಗೆ ಗ್ರಾಮದಲ್ಲಿ ಅಗತ್ಯ ಮೂಲಭೂತ ಸೌಕರ್ಯಗಳನ್ನು ತುರ್ತಾಗಿ ಕಲ್ಪಿಸಲು ಕ್ರಮ ಕೈಗೊಳ್ಳುವಂತೆ ಸೂಚನೆ ನೀಡಿದರು.

ಅಧಿಕಾರಿಗಳು ಸೂಕ್ತ ಕ್ರಮ ಕೈಗೊಳ್ಳದಿದ್ದರೆ, ಗ್ರಾಮದಲ್ಲಿ ಅಕ್ರಮ ಮದ್ಯ ಮಾರಾಟ ನಡೆಯುತ್ತಿರುವ ಸ್ಥಳಗಳನ್ನು ತಾವೇ ಗುರುತಿಸಿ ತೋರಿಸುವುದಾಗಿ ಗ್ರಾಮಸ್ಥರು ಎಚ್ಚರಿಕೆ ನೀಡಿದರು.

ಸಭೆಯಲ್ಲಿ ಉಪಸ್ಥಿತರಿದ್ದವರು*

ಸಭೆಯಲ್ಲಿ ನಾಗಮ್ಮ, ಭಾಗ್ಯಮ್ಮ, ದುರ್ಗಮ್ಮ, ಪದ್ಮಮ್ಮ, ವಿಜಯಲಕ್ಷ್ಮಿ, ಪರಮಮ್ಮ, ಮಂಜುಳಾ, ಪವಡೆಮ್ಮ, ನರಸಮ್ಮ ಸೇರಿದಂತೆ ಗ್ರಾಮದ ಮಹಿಳೆಯರು ಭಾಗವಹಿಸಿದ್ದರು. ವಿವಿಧ ಸಂಘಟನೆಗಳ ಮುಖಂಡರಾದ ಅಣ್ಣಯ್ಯ, ಹಂಪಯ್ಯ, ಕೃಷ್ಣ ನಾಯಕ, ಅಂಬಣ್ಣ, ನಾಗಪ್ಪ, ರಾಜು ನಾಯಕ್, ಹುಸೇನ್ ಸಾಬ್, ದ್ಯಾವಪ್ಪ ಕ್ಯಾತ, ಶಿವಕುಮಾರ್ ದಿನ್ನಿ, ಕನಕಪ್ಪ ಗಂಗಾವತಿ ಸೇರಿದಂತೆ ನೂರಾರು ಗ್ರಾಮಸ್ಥರು ಸಭೆಯಲ್ಲಿ ಉಪಸ್ಥಿತರಿದ್ದರು.

ನೇಮಕಾತಿ ಪ್ರಕಟಣೆ

HSFC ನೇಮಕಾತಿ 2026 ? 4 ವೈದ್ಯಾಧಿಕಾರಿ (Medical Officer) ಹುದ್ದೆಗಳಿಗೆ ಆಫ್‌ಲೈನ್ ಮೂಲಕ ಅರ್ಜಿ ಸಲ್ಲಿಸಿ ಅಕ್ಟೋಬರ್ 12, 2026

ISRO HSFC ನೇಮಕಾತಿ 2026: 04 ವೈದ್ಯಾಧಿಕಾರಿ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ISRO ಹ್ಯೂಮನ್ ಸ್ಪೇಸ್ ಫ್ಲೈಟ್ ಸೆಂಟರ್ (ISRO HSFC), ಅಕ್ಟೋಬರ್ 2026ರ ಅಧಿಕೃತ ಅಧಿಸೂಚನೆಯ ಮೂಲಕ ವೈದ್ಯಾಧಿಕಾರಿ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ಕರ್ನಾಟಕದ ಬೆಂಗಳೂರಿನಲ್ಲಿ ಸರ್ಕಾರಿ ಉದ್ಯೋಗವನ್ನು ಹುಡುಕುತ್ತಿರುವವರು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು 08–ನವೆಂಬರ್–2026 ರಂದು ಅಥವಾ ಅದಕ್ಕೂ ಮೊದಲು ಆಫ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು. ಅಧಿಕೃತ ವೆಬ್‌ಸೈಟ್: isro.gov.in

ಕರ್ನಾಟಕ ರಕ್ಷಣಾ ವೇದಿಕೆ ತಾಲೂಕು ಕಾರ್ಯದರ್ಶಿಯನ್ನಾಗಿ ಉಸ್ಮಾನ್ ಪಟೇಲ್ ಬಿರಾದರ್ ಆಯ್ಕೆ

❑ ನೈಜ್ಯ ದೆಸೆ ನ್ಯೂಸ್

ಯಾದಗಿರಿ: ಜಿಲ್ಲೆಯ ಹುಣಸಿಗಿ ತಾಲೂಕಿನ ಕರ್ನಾಟಕ ರಕ್ಷಣಾ ವೇದಿಕೆ ತಾಲೂಕು ಘಟಕದ ಕಾರ್ಯದರ್ಶಿಯಾಗಿ ವಸ್ಮಾನ್ ಪಟೇಲ್ ಬಿರಾದರ್ ಇವರನ್ನು ಆಯ್ಕೆ ಮಾಡಲಾಗಿದೆ ಜಿಲ್ಲಾಧ್ಯಕ್ಷರಾದ ಟಿ ಎನ್ ಭೀಮು ನಾಯಕ್ ಅವರ ನೇತೃತ್ವದಲ್ಲಿ ಹುಣಸಿ ತಾಲೂಕ ಅಧ್ಯಕ್ಷರಾದ ಬಸವರಾಜ್ ಚನ್ನೂರ್ ಅವರ ಆದೇಶದ ಮೇರೆಗೆ ಕರ್ನಾಟಕ ರಕ್ಷಣಾ ವೇದಿಕೆ ಕಾರ್ಯಕರ್ತರ ಸಮ್ಮುಖದಲ್ಲಿ ಉಸ್ಮಾನ್ ಪಟೇಲ್ ಬಿರಾದಾರ್ ಅವರೆಗೆ ಹುಣಸಿಗಿ ತಾಲೂಕು ಪ್ರಧಾನ ಕಾರ್ಯದರ್ಶಿ ಜವಾಬ್ದಾರಿಯನ್ನು ವಯಿಸಲಾಯಿತು.



ಈ ಮೂಲಕ ಉಸ್ಮಾನ ಪಟೇಲ್ ಬಿರಾದರ್ ಇವರು ತಾಲೂಕು ಆದ–ಯಂತ ತಿರುಗಾಡಿ ಸಂಘಟನೆ ಬೆಳೆಸುವ ಕೆಲಸವನ್ನು ಮಾಡಬೇಕು ಹಾಗೆ ಸಾರ್ವಜನಿಕರಿಗೆ ಉತ್ತಮ ಕೆಲಸ ಮಾಡಿ ಕೊಡುವ ಮುಖಾಂತರ ಕರ್ನಾಟಕ ರಕ್ಷಣಾ ವೇದಿಕೆ ಹೆಸರನ್ನು ಗಳಿಸಬೇಕು ಎಂದು ಈ ಸಂದರ್ಭದಲ್ಲಿ ಹೇಳಿದರು. ಈ ಸಂದರ್ಭದಲ್ಲಿ ರಕ್ಷಣಾ ವೇದಿಕೆ ಹಲವು ಪದಾಧಿಕಾರಿಗಳು ಪಾಲ್ಗೊಂಡಿದ್ದರು.

ಮಾನ್ವಿಯ ಎರಡು ಬೆಟ್ಟಗಳಿಗೆ ರೋಪ್‌ವೇ ನಿರ್ಮಿಸಲು ಮನವಿ

❑ ನೈಜ್ಯ ದೆಸೆ ನ್ಯೂಸ್

ಮಾನ್ವಿ: ರಾಯಚೂರು ಜಿಲ್ಲೆಯ ಮಾನ್ವಿ ನಗರದ ಬೆಟ್ಟದ ಮೇಲಿರುವ ಶ್ರೀ ಮಲ್ಲಿಕಾರ್ಜುನ ದೇವಸ್ಥಾನ ಹಾಗೂ ಪಕ್ಕದ ಬೆಟ್ಟದ ಮೇಲಿರುವ ಸಬ್ಜಲಿ ಸಾಬ್ ದರ್ಗಾಕ್ಕೆ ರೋಪ್‌ವೇ ಸೌಲಭ್ಯ ಕಲ್ಪಿಸುವಂತೆ ಜನ ಹಿತ ಅಭಿವೃದ್ಧಿ ವೇದಿಕೆಯ ಸಂಚಾಲಕರು ಹಾಗೂ ನಿವೃತ್ತ ಐಪಿಎಸ್ ಅಧಿಕಾರಿ ನಾಗೇಶ್ ಎಚ್. ಅವರು ಪ್ರವಾಸೋದ್ಯಮ ಮತ್ತು ಇಂಧನ ಸಚಿವರಿಗೆ ಮನವಿ ಸಲ್ಲಿಸಿದ್ದಾರೆ.



ಮಾನ್ವಿಯ ಶ್ರೀ ಮಲ್ಲಿಕಾರ್ಜುನ ದೇವಸ್ಥಾನವು ಪ್ರಸಿದ್ಧ ಧಾರ್ಮಿಕ ಕ್ಷೇತ್ರವಾಗಿದ್ದು, ಪ್ರತಿವರ್ಷ ಸಾವಿರಾರು ಭಕ್ತರು ದರ್ಶನ ಪಡೆಯಲು ಆಗಮಿಸುತ್ತಾರೆ. ಅದೇ ರೀತಿ, ಸಬ್ಜಲಿ ಸಾಬ್ ದರ್ಗಾಕ್ಕೂ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಭೇಟಿ ನೀಡುತ್ತಾರೆ. ಆದರೆ, ಬೆಟ್ಟದ ಮೇಲಿರುವ ಈ ಎರಡೂ ಧಾರ್ಮಿಕ ಸ್ಥಳಗಳಿಗೆ ತಲುಪಲು ಹಿರಿಯ ನಾಗರಿಕರು, ವಿಕಲಚೇತನರು ಹಾಗೂ ದೈಹಿಕವಾಗಿ ನಡೆಯಲು ಕಷ್ಟಪಡುವ ಭಕ್ತರು ತೊಂದರೆ ಅನುಭವಿಸುತ್ತಿದ್ದಾರೆ ಎಂದು ಮನವಿಯಲ್ಲಿ ತಿಳಿಸಿದ್ದಾರೆ. ಎರಡೂ ಬೆಟ್ಟಗಳಿಗೆ ರೋಪ್‌ವೇ ಸೌಲಭ್ಯ ಕಲ್ಪಿಸಿದರೆ ಎಲ್ಲ ಭಕ್ತಾದಿಗಳಿಗೆ ಸುಲಭವಾಗಿ ದರ್ಶನ ಪಡೆಯಲು ಅನುಕೂಲವಾಗಲಿದೆ. ಅಲ್ಲದೆ, ಮಾನ್ವಿ ನಗರದ ಧಾರ್ಮಿಕ ಪ್ರವಾಸೋದ್ಯಮಕ್ಕೆ ಉತ್ತೇಜನ ದೊರೆಯಲಿದ್ದು, ಹೊರ ಜಿಲ್ಲೆಗಳಿಂದಲೂ ಪ್ರವಾಸಿಗರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸುವ ಸಾಧ್ಯತೆಯಿದೆ. ಇದರಿಂದ ಸ್ಥಳೀಯ ವ್ಯಾಪಾರ ವಹಿವಾಟು ವೃದ್ಧಿಸುವುದರ ಜೊತೆಗೆ ಸರ್ಕಾರದ ಆದ–ಾಯಕ್ಕೂ ನೆರವಾಗಲಿದೆ ಎಂದು ಮನವಿಯಲ್ಲಿ ವಿವರಿಸಿದ್ದಾರೆ. ಆದ್ದರಿಂದ ಸಂಬಂಧಪಟ್ಟ ಅಧಿಕಾರಿಗಳು ಎರಡೂ ಬೆಟ್ಟಗಳ ಸ್ಥಳ ಪರಿಶೀಲನೆ ನಡೆಸಿ, ರೋಪ್‌ವೇ ನಿರ್ಮಾಣದ ಸಾಧ್ಯತೆಗಳ ಕುರಿತು ಅಧ್ಯಯನ ಕೈಗೊಂಡು ಅಗತ್ಯ ಕ್ರಮ ಜರುಗಿಸಬೇಕು ಎಂದು ನಾಗೇಶ್ ಎಚ್. ಅವರು ಮನವಿ ಮಾಡಿದ್ದಾರೆ.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

ರಾಯಚೂರು ಜಿಲ್ಲೆಯ ಜಿಲ್ಲಾ ಪಂಚಾಯಿತಿ ಮತ್ತು ತಾಲೂಕು ಪಂಚಾಯಿತಿಗಳಲ್ಲಿ ಹಿಂದುಳಿದ ವರ್ಗಗಳಿಗೆ ಅನ್ಯಾಯ: ರಾಘವೇಂದ್ರ ಖಾಜನಗೌಡ ಖಂಡನೆ

❑ ನೈಜ್ಯ ದೆಸೆ ನ್ಯೂಸ್

ಸಿರವಾರ: ರಾಯಚೂರು ಜಿಲ್ಲೆಯ 39 ಜಿಲ್ಲಾ ಪಂಚಾಯಿತಿ ಹಾಗೂ 133 ತಾಲೂಕು ಪಂಚಾಯಿತಿ ಕ್ಷೇತ್ರಗಳಲ್ಲಿ ಹಿಂದುಳಿದ ವರ್ಗದ ಜನರಿಗೆ ಅನ್ಯಾಯವಾಗಿದೆ ಎಂದು ಆರೋಪಿಸಿ, ಸಿರವಾರ ತಾಲೂಕು ಹಿಂದುಳಿದ ಜಾತಿಗಳ ಒಕ್ಕೂಟದ ವತಿಯಿಂದ ಪತ್ರಿಕಾ ಹೇಳಿಕೆ ಬಿಡುಗಡೆ ಮಾಡಲಾಯಿತು.

ಈ ಕುರಿತು ಮಾತನಾಡಿದ ಹಿಂದುಳಿದ ವರ್ಗಗಳ ಒಕ್ಕೂಟದ ತಾಲೂಕು ಕಾರ್ಯಾಧ್ಯಕ್ಷ ಕೆ. ರಾಘವೇಂದ್ರ ಖಾಜನಗೌಡ ಅವರು, ಜಿಲ್ಲಾ ಪಂಚಾಯಿತಿ ಹಾಗೂ ತಾಲೂಕು ಪಂಚಾಯಿತಿ ಕ್ಷೇತ್ರಗಳಲ್ಲಿ ಹಿಂದುಳಿದ



ವರ್ಗಗಳಿಗೆ ಆಗಿರುವ ಅನ್ಯಾಯವನ್ನು ಖಂಡಿಸಿದರು. ಹಿಂದುಳಿದ ವರ್ಗಗಳ ಹಕ್ಕುಗಳಿಗೆ ಧಕ್ಕೆಯಾಗದಂತೆ ನೋಡಿಕೊಳ್ಳಬೇಕು. ಸಾಮಾಜಿಕ ನ್ಯಾಯದ ತತ್ವದಡಿ ಎಲ್ಲ ಸಮುದಾಯಗಳಿಗೂ ನ್ಯಾಯಯುತ ಪ್ರಾತಿನಿಧ್ಯ ದೊರೆಯುವಂತೆ ಸಂಬಂಧಪಟ್ಟ ಅಧಿಕಾರಿಗಳು ಹಾಗೂ ಸರ್ಕಾರ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಹಿಂದುಳಿದ ವರ್ಗಗಳ ಹಿತಾಸಕ್ತಿಯನ್ನು ಕಾಪಾಡಲು ಸರ್ಕಾರ ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿ, ಸಮಸ್ಯೆಯನ್ನು ಪರಿಹರಿಸಲು ಮುಂದಾಗಬೇಕು ಎಂದು ಪತ್ರಿಕಾ ಹೇಳಿಕೆಯ ಮೂಲಕ ಆಗ್ರಹಿಸಲಾಯಿತು.

ಈ ಸಂದರ್ಭದಲ್ಲಿ ತಾಲೂಕು ಕಾರ್ಯಾಧ್ಯಕ್ಷ ಕೆ. ರಾಘವೇಂದ್ರ ಖಾಜನಗೌಡ, ರಾಮನಗೌಡ ದೇವತಗಲ್, ಚಂದ್ರು ಅಡಪದ್, ಕರಿಯಪ್ಪ ಎಚ್.ಕೆ., ಅಯ್ಯಪ್ಪ ದೂಂಡಬಳಿ, ಅಮರೇಶ್ ಕನಸವಿ, ಬಸವರಾಜ್ ಹೀರಾ, ಬಸವರಾಜ್ ಬೂದುರು, ಶರಣಬಸವ ಹೀರಾ, ವಿನೋದ್ ಸೇರಿದಂತೆ ವಿವಿಧ ಸಮಾಜಗಳ ಅಧ್ಯಕ್ಷರು ಹಾಗೂ ಹಿಂದುಳಿದ ಸಮಾಜಗಳ ಒಕ್ಕೂಟದ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಇಂಡೋ–ವಿಂಡೀಸ್ ಟಿ–20 ಪಂದ್ಯಕ್ಕೆ ಚಿನ್ನಸ್ವಾಮಿ ಕ್ರೀಡಾಂಗಣ ಸಜ್ಜು

❑ ನೈಜ್ಯ ದೆಸೆ ನ್ಯೂಸ್

ಬೆಂಗಳೂರು: ನಗರದ ಎಂ. ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಾಳೆ ನಡೆಯಲಿರುವ ಭಾರತ ಮತ್ತು ವೆಸ್ಟ್ ಇಂಡೀಸ್ ನಡುವಿನ ರೋಚಕ ಟಿ–20 ಕ್ರಿಕೆಟ್ ಪಂದ್ಯಕ್ಕಾಗಿ ಸಕಲ ಸಿದ್ಧತೆಗಳು ನಡೆದಿವೆ.ಪಂದ್ಯದ ವೇಳೆ ಸಾರ್ವಜನಿಕರಿಗೆ ಯಾವುದೇ ರೀತಿಯ ಸಂಚಾರ ದಟ್ಟಣೆ ಉಂಟಾಗದಂತೆ ತಡೆಯಲು ಮತ್ತು ಸುಗಮ ಸಂಚಾರವನ್ನು ಖಚಿತಪಡಿಸಲು ಬೆಂಗಳೂರು ಸಂಚಾರ ಪೊಲೀಸರು ಬಿಗಿ ಭದ್ರತೆ ಹಾಗೂ ಕಾವಲು ಕ್ರಮಗಳನ್ನು ಕೈಗೊಂಡಿದ್ದು, ಪ್ರಮುಖ ರಸ್ತೆಗಳಲ್ಲಿ ವಾಹನ ಸಂಚಾರ ಹಾಗೂ ನಿಲುಗಡೆ ನಿಷೇಧಿಸಿ ಆದೇಶ ಹೊರಡಿಸಿದ್ದಾರೆ.

ಪಂದ್ಯದ ಹಿನ್ನೆಲೆಯಲ್ಲಿ ಕ್ರೀಡಾಂಗಣದ ಸುತ್ತಮುತ್ತಲಿನ ಪ್ರಮುಖ ರಸ್ತೆಗಳಲ್ಲಿ ವಾಹನ ನಿಲುಗಡೆಯನ್ನು ನಿಷೇಧಿಸಲಾಗಿದೆ. ಬಾಳೇಕುಂದ್ರಿ ವೃತ್ತ, ಕ್ವೀನ್?ಸ ವೃತ್ತ ಮತ್ತು ಸಿಟಿಒ ಜಂಕ್ಷನ್ ನಡುವಿನ ಕ್ವೀನ್?ಸ ರಸ್ತೆಯ ಎರಡೂ



ಬದಿಗಳಲ್ಲಿ ವಾಹನ ನಿಲ್ಲಿಸುವಂತಿಲ್ಲ. ಕ್ವೀನ್?ಸ ವೃತ್ತದಿಂದ ಅನಿಲ್ ಕುಂಬ್ಳೆ ವೃತ್ತದವರೆಗಿನ ಎಂಜಿ ರಸ್ತೆ, ಎಂಜಿ ರಸ್ತೆ ಮತ್ತು ಕಬ್ಬನ್ ರಸ್ತೆ ನಡುವಿನ ಸಂಪರ್ಕ ರಸ್ತೆ ಹಾಗೂ ಲೋಕ ಭವನ ರಸ್ತೆ, ಟಿ.ಚೌಡಯ್ಯ ರಸ್ತೆ, ರೇಸ್ ಕೋರ್ಸ್ ರಸ್ತೆ ಮತ್ತು ಸೆಂಟ್ರಲ್ ಸ್ಟ್ರೀಟ್‌ನಲ್ಲಿಯೂ ಪಾರ್ಕಿಂಗ್‌ಗೆ ನಿರ್ಬಂಧ ವಿಧಿಸಲಾಗಿದೆ.

ಇದರೊಂದಿಗೆ, ಸಿಟಿಒ ವೃತ್ತದಿಂದ ಮಣಿಪಾಲ್ ವೃತ್ತದವರೆಗಿನ ಕಬ್ಬನ್ ರಸ್ತೆ, ಕಾವೇರಿ ಎಂಪೋರಿಯಂ ಜಂಕ್ಷನ್‌ನಿಂದ ಡಿಕೆನ್ಸನ್ ಜಂಕ್ಷನ್‌ವರೆಗಿನ ರಸ್ತೆ, ಕಾಮರಾಜ್ ರಸ್ತೆ ಹಾಗೂ ಸೇಂಟ್ ಮಾರ್ಕ್ಸ್ ರಸ್ತೆಯ ನಿರ್ದಿಷ್ಟ ಭಾಗಗಳಲ್ಲಿಯೂ ವಾಹನ ನಿಲುಗಡೆಗೆ ಅವಕಾಶವಿರುವುದಿಲ್ಲ.

ಮ್ಯೂಸಿಯಂ ಕ್ರಾಸ್ ರಸ್ತೆ, ಕಸ್ತೂ–ರಿಬಾ ರಸ್ತೆ, ಕಿಂಗ್ ರಸ್ತೆ, ಲ್ಯಾವೆಲ್ಲೆ ರಸ್ತೆ ಮತ್ತು ವಿಠಲ್ ಮಲ್ಯ ರಸ್ತೆಯ ಕೆಲವು ಭಾಗಗಳಲ್ಲಿಯೂ ನಿರ್ಬಂಧಗಳು ಜಾರಿಯಲ್ಲಿರಲಿವೆ. ಕಬ್ಬನ್ ಪಾರ್ಕ್ ಒಳಭಾಗದಲ್ಲಿ ಹಾಗೂ ಪ್ರೆಸ್ ಕ್ಲಬ್ ಮತ್ತು ಬಾಲಭವನದ ಮುಂಭಾಗದಲ್ಲಿಯೂ ವಾಹನ ನಿಲುಗಡೆ ನಿಷೇಧಿಸಲಾಗಿದೆ.

ಗೊತ್ತುಪಡಿಸಿದ ಸ್ಥಳಗಳಲ್ಲಿ ಪಾರ್ಕಿಂಗ್ ವ್ಯವಸ್ಥೆ : ಪ್ರೇಕ್ಷಕರು ಎಲ್ಲೆಂದರಲ್ಲಿ ವಾಹನಗಳನ್ನು ನಿಲ್ಲಿಸುವುದನ್ನು ತಪ್ಪಿಸಲು ಗೊತ್ತುಪಡಿಸಿದ ಸ್ಥಳಗಳಲ್ಲಿ ಪಾರ್ಕಿಂಗ್ ವ್ಯವಸ್ಥೆ ಕಲ್ಪಿಸಲಾಗಿದೆ. ಲಭ್ಯ ಮಾಹಿತಿಯ ಪ್ರಕಾರ, ಸೇಂಟ್ ಜೋಸೆಫ್?ಸ ಇಂಡಿಯನ್ ಹೈಸ್ಕೂಲ್ ಸೇರಿದಂತೆ ನಿಗದಿತ ಪಾರ್ಕಿಂಗ್ ಸ್ಥಳಗಳು ಬೆಳಿಗ್ಗೆ 11ರಿಂದ ರಾತ್ರಿ 9ರವರೆಗೆ ಕಾರ್ಯನಿರ್ವಹಿಸಲಿವೆ. ಇತರ ಪಾರ್ಕಿಂಗ್ ಸ್ಥಳಗಳ ವಿವರ ಹಾಗೂ ವಾಹನ ನಿಲುಗಡೆಗೆ ಸಂಬಂಧಿಸಿದ ಸೂಚನೆಗಳನ್ನು ಸಂಚಾರ ಪೊಲೀಸರ ಅಧಿಕೃತ ಪ್ರಕಟಣೆಯ ಮೂಲಕ ಖಚಿತಪಡಿಸಿಕೊಳ್ಳುವುದು ಸೂಕ್ತ.

ಸಾಮಾಜಿಕ ಜಾಲತಾಣಗಳಲ್ಲಿ ನಕಲಿ ಖಾತೆ: ಪೊಲೀಸರಿಗೆ ಕಠಿಣ ಎಚ್ಚರಿಕೆ ನೀಡಲು ಡಿಜಿಪಿಗೆ ಪ್ರಾಧಿಕಾರದ ಸದಸ್ಯ ಮೋಹನ್ ಕುಮಾರ ದಾನಪ್ಪ ಪತ್ರ

❑ ನೈಜ್ಯ ದೆಸೆ ನ್ಯೂಸ್

ಬಳ್ಳಾರಿ / ಕಂಪ್ಲಿ : ಪೊಲೀಸ್ ಇಲಾಖೆಯ ನೈಜ ಗುರುತನ್ನು ಮರೆಮಾಚಿ, ಸ್ವಾತಂತ್ರ್ಯ ಹೋರಾಟಗಾರರು ಹಾಗೂ ಇತರೆ ನಕಲಿ ಹೆಸರುಗಳಲ್ಲಿ ಅನಾಮಧೇಯ ಖಾತೆಗಳನ್ನು ತೆರೆದು ಸರ್ಕಾರದ ಆಡಳಿತಾತ್ಮಕ ನಿರ್ಧಾರಗಳು ಮತ್ತು ಹಿರಿಯ ಅಧಿಕಾರಿಗಳ ವಿರುದ್ಧ ಆಕ್ಷೇಪಾರ್ಹ ಪೋಸ್ಟ್‌ಗಳನ್ನು ಹಾಕುತ್ತಿರುವ ಸಿಬ್ಬಂದಿ ವಿರುದ್ಧ ಕಠಿಣ ಶಿಸ್ತು ಕ್ರಮಕ್ಕೆ ಕರ್ನಾಟಕ ರಾಜ್ಯ ಪೊಲೀಸ್ ದೂರುಗಳ ಪ್ರಾಧಿಕಾರವು ಮಹಾನಿರ್ದೇಶಕರು ಮತ್ತು ಆರಕ್ಷಕ ಮಹಾನಿರೀಕ್ಷಕರಿಗೆ (ಡಿಜಿ ಮತ್ತು ಐಜಿಪಿ) ಪತ್ರ ಬರೆದು ಒತ್ತಾಯಿಸಿದ್ದಾರೆ.



ಪ್ರಾಧಿಕಾರದ ಸದಸ್ಯ ಮೋಹನ್ ಕುಮಾರ್ ದಾನಪ್ಪ ಅವರು ಅಕ್ಟೋಬರ್ 15ರಂದು ನೀಡಿರುವ ನಿರ್ದೇಶನದನ್ವಯ, ಮುಖ್ಯಮಂತ್ರಿಗಳು, ಸಚಿವರು ಹಾಗೂ ಜನಪ್ರತಿನಿಧಿಗಳ ಅಧಿಕೃತ ಸಾಮಾಜಿಕ ಜಾಲತಾಣ ಪುಟಗಳಲ್ಲೂ ಅವಹೇಳನಕಾರಿ ಕಾಮೆಂಟ್‌ಗಳನ್ನು ಮಾಡುತ್ತಿರುವ ಪ್ರಕರಣಗಳು ಇಲಾಖೆಯ ಘನತೆಗೆ ಧಕ್ಕೆ ತರುತ್ತಿವೆ. ಸೇವಾ ನಡತೆ ನಿಯಮಗಳು ಮತ್ತು ಮಾಹಿತಿ ತಂತ್ರಜ್ಞಾನ (ಐಟಿ) ಕಾಯ್ದೆಯ ಉಲ್ಲಂಘನೆಯಾಗಿರುವ ಈ ಕೃತ್ಯಗಳ ನಿಯಂತ್ರಣಕ್ಕಾಗಿ

* ಎಸ್.ಎಂ.ಎಂ. ಸೆಲ್ ನಿಗಾ: ಸಾಮಾಜಿಕ ಮಾಧ್ಯಮ ಮೇಲ್ವಿಚಾರಣಾ ಕೋಶದ ಮೂಲಕ ನಕಲಿ ಹಾಗೂ ಅನಾಮಧೇಯ ಖಾತೆಗಳ ಮೇಲೆ ತೀವ್ರ ನಿಗಾ ಇಡುಬೇಕು.
* ಸ್ವಯಂಪ್ರೇರಿತ ದೂರು: ನಿಯಮ ಮೀರಿ ಪೋಸ್ಟ್ ಮಾಡುವವರ ವಿರುದ್ಧ ಸ್ವಯಂ (ಸುಮೊಟೊ) ಪ್ರಕರಣ ದಾಖಲಿಸುವುದು.
* ಕಟ್ಟುನಿಟ್ಟಿನ ಸುತ್ತೋಲೆ: ಎಲ್ಲಾ ಪೊಲೀಸ್ ಘಟಕ ಮತ್ತು ವಿಭಾಗಗಳಲ್ಲಿ ಇಂತಹ ಚಟುವಟಿ–ಕೆಗಳನ್ನು ನಿಷೇಧಿಸಿ ಕಠಿಣ ಆದೇಶ ಹೊರಡಿಸುವುದು.
* ವರದಿ ಸಲ್ಲಿಕೆ: ಕೈಗೊಂಡ ಕ್ರಮಗಳ ಕುರಿತು ಪ್ರಾಧಿಕಾರದ ಕಚೇರಿಗೆ ಅಧಿಕೃತ ಮಾಹಿತಿ

ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ; ನಿವೃತ್ತ ಶಿಕ್ಷಕ ಟಿ.ಕೆ. ಬಸವರಾಜುಗೆ ಗೌರವ ಸಮರ್ಪಣೆ

❑ ನೈಜ್ಯ ದೆಸೆ ನ್ಯೂಸ್

ತಾಂಡವಪುರ: ಅಕ್ಟೋಬರ್ 16 ಸುತ್ತೂರು ಮಠದ ಶ್ರೀ ಶಿವರಾತ್ರೀಶ್ವರ ಮಾಧ್ಯಮ ಪ್ರಶಸ್ತಿ ಪುರಸ್ಕೃತ ನಂಜನಗೂಡು ತಾಲೂಕು ಚಿಕ್ಕಯ್ಯನ ಛತ್ರ ಹೋಬಳಿ ವರುಣ ವಿಧಾನಸಭಾ ಕ್ಷೇತ್ರಕ್ಕೆ ಸೇರುವ ಗ್ರಾಮೀಣ ಪತ್ರಕರ್ತ ತಾಂಡವಪುರ ಟಿಕೆ ಬಸವರಾಜ ಅವರನ್ನು ಹಾಗೂನಿವೃತ್ತ ಶಿಕ್ಷಕರು ಹಾಗೂ ಕುರುಬ ಸಮಾಜದ 10ನೇ ತರಗತಿ ಪಿಯುಸಿಯಲ್ಲಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಮಾಜಿ ಶಾಸಕ ದಿವಂಗತ ಎನ್ ರಾಚಯ್ಯನವರ ಅಭಿಮಾನಿ ಬಳಗ ಹಾಗೂ ಡಾಕ್ಟರ್ ಎಸ್ ಯತೀಂದ್ರ ಸಿದ್ದರಾಮಯ್ಯ ಫೌಂಡೇಶನ್ ವತಿಯಿಂದ ಪ್ರತಿಭಾ ಪುರಸ್ಕಾರ ನೀಡಿ ಸನ್ಮಾನಿಸಿ ಗೌರವ ಸಮರ್ಪಣೆ ಮಾಡಿದರು.

ನಂಜನಗೂಡು ತಾಲೂಕು ವರುಣ ವಿಧಾನಸಭಾ ಕ್ಷೇತ್ರಕ್ಕೆ ಸೇರುವ ಕೆಂಪಿ ಸಿದ್ದನ ಹುಂಡಿ ಗ್ರಾಮದ ಡಾಕ್ಟರ್ ಎಸ್ ಯತೀಂದ್ರ ಸಿದ್ದರಾಮಯ್ಯ ಫೌಂಡೇಶನ್ ಅಧ್ಯಕ್ಷ ಕೆ ಆರ್ ರವಿಕುಮಾರ್ ಹಾಗೂ ದಿವಂಗತ ಎನ್ ರಾಚಯ್ಯನವರ 46ನೇ ವರ್ಷದ ಸ್ವರ್ಣಾರ್ಥ ಹಮ್ಮಿಕೊಂಡಿರುವ ಅಭಿಮಾನಿ ಬಳಗದ ವತಿಯಿಂದ ಕುರುಬ ಸಮಾಜದ ಸಾಧಕರನ್ನುಇನ್ಸ ಸೈಡ್ಸ್ ಐಎ ಎಸ್ ಸಂಸ್ಥಾಪಕ ಜೆ ಬಿ ವಿನಯ್ ಕುಮಾರ್ ಅವರು ಹಾಗೂ ಬೆಳಗದವರು ಪ್ರತಿಭಾ ಪುರಸ್ಕಾರ ನೀಡಿ ಸನ್ಮಾನಿಸಿ ಗೌರವಿಸಿ ಅಭಿನಂದಿಸಿದರು ಅಭಿನಂದಿಸಿದರು ದಕ್ಷಿಣ ಕಾಶಿ ನಂಜನಗೂಡಿನ ಸಾರ್ವಜನಿಕ ಶ್ರೀ ಕನಕದಾಸ ವಿದ್ಯಾರ್ಥಿ ನಿಲಯದ ಆವರಣದಲ್ಲಿ ಏರ್ಪಡಿಸಿದ್ದ ಈ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿದ



ವಿನಯ್ ಕುಮಾರ್ ಅವರು ಕುರುಬ ಸಮಾಜದ ಪ್ರತಿಭಾವಂತ ವಿದ್ಯಾರ್ಥಿಗಳು ತಮ್ಮ ವಿದ್ಯಾಭ್ಯಾಸವನ್ನು ಅರ್ಧಕ್ಕೆ ನಿಲ್ಲಿಸದೆ ಉತ್ತಮ ಶಿಕ್ಷಣ ಪಡೆದರೆ ಮಾತ್ರ ನಮ್ಮ ಸಮಾಜದ ವಿದ್ಯಾರ್ಥಿಗಳು ಇನ್ನೂ ಉನ್ನತಮಕ್ಕೆ ಉನ್ನತ ಹುದ್ದೆಗಳಿಗೆ ಹೋಗಲು ಸಾಧ್ಯ ಆ ದಿಕ್ಕಿನಲ್ಲಿ ಇಂದಿನ ವಿದ್ಯಾರ್ಥಿಗಳು ತಮ್ಮ ಹೆಚ್ಚಿನ ಶಿಕ್ಷಣದ ಕಡೆಗೆ ಗಮನಹರಿಸಿ ಉನ್ನತ ಹುದ್ದೆಗೆ ಹೋಗಲು ಹೆಚ್ಚಿನ ಶಿಕ್ಷಣ ಪಡೆಯಬೇಕಾದರೆ ಸಮಾಜದ ವಿದ್ಯಾರ್ಥಿಗಳಿಗೆ ನಮ್ಮ ಸಂಸ್ಥೆ ಉಚಿತ ಶಿಕ್ಷಣ ನೀಡುತ್ತದೆ ಇದರ ಸದುಪಯೋಗವನ್ನು ಸಮಾಜದ ವಿದ್ಯಾರ್ಥಿಗಳು ಪಡೆದುಕೊಳ್ಳಿ ಎಂದು ವಿದ್ಯಾರ್ಥಿಗಳಿಗೆ ಸಲಹೆ ನೀಡಿದ ವಿನಯ್ ಕುಮಾರ್ ಅವರು ಹಿಂದುಳಿದ ವರ್ಗದವರನ್ನು ಮುಂದುವರೆದ ಸಮಾಜದವರು ತುಳಿಯುತ್ತಲೇ ಬರುತ್ತಿದ್ದಾರೆ.

ಅದನ್ನು ಮೆಟ್ಟಿ ನಿಲ್ಲಬೇಕಾದರೆ ನಾವು ಒಗ್ಗಟ್ಟಾಗಿ ಉನ್ನತ ಶಿಕ್ಷಣ ಪಡೆದು ರಾಜಕೀಯವಾಗಿ ಶೈಕ್ಷಣಿಕವಾಗಿ ಆರ್ಥಿಕವಾಗಿ ಮುಂದೆ ಬಂದರೆ ಮಾತ್ರ ನಾವು ಸಮಾಜದಲ್ಲಿ ಉನ್ನತ ಸ್ಥಾನಮಾನಗಳನ್ನು ಗಳಿಸಲು ಸಾಧ್ಯ ಎಂದು ಹೇಳಿದ ಅವರು ಈ ಬಲಿಷ್ಠ ಸಮಾಜದಲ್ಲಿ ನಮ್ಮ ಹಿಂದುಳಿದ ವರ್ಗದ ಅದರಲ್ಲೂ ಕುರುಬ ಸಮಾಜದ ಸಿದ್ದರಾಮಯ್ಯನವರು ಎರಡು ಬಾರಿ ಮುಖ್ಯಮಂತ್ರಿಗಳಾಗಿದ್ದಾರೆ ಎಂದರೆ ಅದಕ್ಕೆ ಅವರು ಪಟ್ಟ ಶ್ರಮ ಅವರು ಗಳಿಸಿರುವ ಪ್ರೀತಿ ವಿಶ್ವಾಸ ಜನ ಮನ್ನಣೆ ಅವರು ಮುಖ್ಯಮಂತ್ರಿ ಆಗಲು ಸಾಧ್ಯವಾಯಿತು. ಸಿದ್ದರಾಮಯ್ಯನವರು ಎಲ್ಲ ವರ್ಗದ ಜನರನ್ನು ಒಗ್ಗೂಡಿಸಿಕೊಂಡು ಎರಡು ಬಾರಿ ಮುಖ್ಯಮಂತ್ರಿಯಾಗಿದ್ದಾರೆ.

ಎಂದರೆ ನಮ್ಮ ಕುರುಬ ಸಮಾಜ ಅಲ್ಲ ಇಡೀ ಹಿಂದುಳಿದ ವರ್ಗದ ಸಮಾಜದವರು ಎಮ್ಮೆ ಪಡುವ ವಿಷಯ ಎಂದು ವಿನಯ್ ಕುಮಾರ್ ಅವರು ಸಿದ್ದರಾಮಯ್ಯನವರ ಸೇವೆಯನ್ನು ಸ್ಮರಿಸಿಕೊಂಡರು ಯತೀಂದ್ರ ಸಿದ್ರಾಮಯ್ಯನವರ ಫೌಂಡೇಶನ್ ಅಧ್ಯಕ್ಷರು ಹಾಗೂ ದಿವಂಗತ ಮಾಜಿ ಶಾಸಕ ಎನ್ ರಾಜನವರ ಅಭಿಮಾನಿ ಬಳಗದವರು ಈ ಸಮಾಜ ಸೇವ ಕಾರ್ಯಕ್ರಮದಲ್ಲಿ ನನ್ನನ್ನು ಕರೆಸಿ ಸಮಾಜದ ಸಾಧಕರಿಗೆ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿ ಸನ್ಮಾನ ಮಾಡುತ್ತಿರುವುದಕ್ಕೆ ನನಗೆ ತುಂಬಾ ಖುಷಿಯಾಗಿದೆ ಎಂದು ವಿನಯ್ ಕುಮಾರ್ ಅವರು ಮೆಚ್ಚುಗೆ ವ್ಯಕ್ತಪಡಿಸಿದರು ಸಮಾರಂಭದಲ್ಲಿಇನ್ಸ ಸೈಡ್ಸ್ ಐಎ ಎಸ್ ಸಂಸ್ಥೆಯ ಸಂಸ್ಥಾಪಕ ಜೆ ಬಿ ವಿನಯ್ ಕುಮಾರ್ ಡಾಕ್ಟರ್ ಎಸ್ ಯತಿಂದ್ರ ಸಿದ್ದರಾಮಯ್ಯ ರವರ ಫೌಂಡೇಶನ್ ಅಧ್ಯಕ್ಷ ಕೆ ಎಸ್ ಹುಂಡಿ ಕೆ ಆರ್ , ರವಿಕುಮಾರ್ ಮುಖಂಡರುಗಳಾದ ಕಳಲೆ ಕನಕರಾಜ್ , ಚಾಮಲಾಪುರದ ಹುಂಡಿ, ರಾಮು ತಾಲೂಕು ಲಾರಿ ಮಾಲೀಕರ ಸಂಘದ ಅಧ್ಯಕ್ಷ ವಿಶ್ವನಾಥ್ ಕೀರ್ತಿರಾಜ್ ವಿಶ್ವಾ , ನಗರಸಭಾ ಸದಸ್ಯ ಗಂಗಾಧರ್ ಗುತ್ತಿಗೆದಾರ ತಾಂಡವಪುರ ಎಂ , ದಕ್ಷಿಣ ಮೂರ್ತಿ ರೈತ ಸಂಘದ ಮುಖಂಡ ಟಿ ಆರ್ ವಿದ್ಯಾಸಾಗರ್ ಬಿಳಿಗೆರೆ ಗೋಲ್ಡ್ ಸುರೇಶ್,

ನಂಜನಗೂಡು ತಾಲೂಕು ಶ್ರೀ ಕನಕ ನೌಕರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಮಹಾದೇವ ಚೆನ್ನಪ್ಪ ವಿದ್ಯಾಸಂಸ್ಥೆಯ ಕುರಟ್ಟಿ ಬಸವರಾಜು ತಾಲೂಕು ಕುರುಬ ಸಮಾಜದ ಮುಖಂಡ ಕೆಂಪಣ್ಣ ಕಾಂಗ್ರೆಸ್ ಮುಖಂಡರಾದ ಮಲ್ಲುಪುರ ಪ್ರದೀಪ್ ಯೋಗೇಶ್ ಕೆ ಎಸ್ ರವಿ ಗ್ಯಾಸ್ ಏಜೆನ್ಸಿ ಮಾಲಿಕರಾದ ಸುರೇಶ್


ಕೊಂಗಳ್ಳಿ ಶಂಕರ್ ಜವರೇಗೌಡ ಬಿಳಿಗೆರೆ ಸುರೇಶ್ ಮಹೇಶ್ ಕೆಂಪಿ ಸಿದ್ದನ ಹುಂಡಿ ಗ್ರಾಮ ಪಂಚಾಯತಿ ಮಾಜಿ ಅಧ್ಯಕ್ಷ ಕೆ ಎಸ್ ರವಿ ಕಿರಗುಂದ ಪುಟ್ಟರಾಜು ಹಾಗೂ ಸಮಾಜದ ವಿದ್ಯಾರ್ಥಿಗಳು ಮುಖಂಡರುಗಳು ಈ ಸಂದರ್ಭದಲ್ಲಿ ಹಾಜರಿದ್ದರು

ವಾಲ್ಮೀಕಿ ಜಯಂತಿ ಅರ್ಥಪೂರ್ಣವಾಗಿ ಆಚರಿಸಲು ನಿರ್ಧಾರ ಎಸ್‌ಎಸ್‌ಎಲ್‌ಸಿ, ಪಿಯುಸಿಯಲ್ಲಿ ಹೆಚ್ಚು ಅಂಕ ಗಳಿಸಿದ ಎಸ್ಟಿ ವಿದ್ಯಾರ್ಥಿಗಳಿಗೆ ಸನ್ಮಾನ


❑ ನೈಜ್ಯ ದೆಸೆ ನ್ಯೂಸ್

ತಾಳಿಕೋಟೆ: ಪಟ್ಟಣದಲ್ಲಿ ಅಕ್ಟೋಬರ್ 26ರಂದು ಮಹರ್ಷಿ ವಾಲ್ಮೀಕಿ ಜಯಂತಿಯನ್ನು ತಾಲೂಕು ಆಡಳಿತ ಹಾಗೂ ವಾಲ್ಮೀಕಿ ಸಮಾಜದ ಸಹಯೋಗದಲ್ಲಿ ಅರ್ಥಪೂರ್ಣವಾಗಿ ಮತ್ತು ವಿಜೃಂಭಣೆಯಿಂದ ಆಚರಿಸಲು ನಿರ್ಧರಿಸಲಾಗಿದೆ ಎಂದು ಪ್ರಭಾರಿ ತಹಶೀಲ್ದಾರ್ ಎಂ.ಎಸ್. ಅರಕೇರಿ ಹೇಳಿದರು.

ತಹಶೀಲ್ದಾರ್ ಕಾರ್ಯಾಲಯದ ಸಭಾಂಗಣದಲ್ಲಿ ಶುಕ್ರವಾರ ನಡೆದ ಜಯಂತಿಯ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಜಯಂತಿಯ ಅಂಗವಾಗಿ ಅಂದು ಬೆಳಿಗ್ಗೆ 8 ಗಂಟೆಗೆ ತಹಶೀಲ್ದಾರ್ ಕಾರ್ಯಾಲಯ ಸೇ–ರಿದಂತೆ ತಾಲೂಕಿನ ಎಲ್ಲ ಸರ್ಕಾರಿ ಕಚೇರಿಗಳು, ಶಾಲಾ–ಕಾಲೇಜುಗಳಲ್ಲಿ ಮಹರ್ಷಿ ವಾಲ್ಮೀಕಿ



ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಪುಷ್ಪನಮನ ಅರ್ಪಿಸಲು ಅಗತ್ಯ ನಿರ್ದೇಶನ ನೀಡಲಾಗುವುದು. ಅಲ್ಲದೆ, ತಾಲೂಕಿನಲ್ಲಿ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪರೀಕ್ಷೆಗಳಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳನ್ನು ಮುಖ್ಯ ವೇದಿಕೆ ಕಾರ್ಯಕ್ರಮದಲ್ಲಿ ಸನ್ಮಾನಿಸಲು ತೀರ್ಮಾನಿಸಲಾಗಿದೆ ಎಂದು ತಿಳಿಸಿದರು. ಅಂದು ಬೆಳಿಗ್ಗೆ 10 ಗಂಟೆಗೆ ದೇವರ ಹಿಪ್ಪರಗಿ ರಸ್ತೆಯಲ್ಲಿರುವ ವಾಲ್ಮೀಕಿ ವೃತ್ತದಲ್ಲಿ ಮಹರ್ಷಿ ವಾಲ್ಮೀಕಿ



ಅವರ ಭಾವಚಿತ್ರಕ್ಕೆ ವಿಶೇಷ ಪೂಜೆ ಸಲ್ಲಿಸಲಾಗುವುದು. ನಂತರ ಸಮೀಪದ ವಾಲ್ಮೀಕಿ ಸಮುದಾಯ ಭವನದಲ್ಲಿ ಮುಖ್ಯ ವೇದಿಕೆ ಕಾರ್ಯಕ್ರಮ ಜರುಗಲಿದೆ. ಮಹರ್ಷಿ ವಾಲ್ಮೀಕಿ ಅವರ ಜೀವನ, ಆದರ್ಶಗಳು ಹಾಗೂ ಸಂದೇಶಗಳ ಕುರಿತು ಉಪನ್ಯಾಸ ನೀಡಲು ಉತ್ತಮ ಉಪನ್ಯಾಸಕರನ್ನು ಆಹ್ವಾನಿಸುವಂತೆ ಸೂಚಿಸಿದರು. ಕಾರ್ಯಕ್ರಮದ ವೇದಿಕೆ ಸಿದ್ಧತೆ ಹಾಗೂ ಅಲಂಕಾರಕ್ಕೆ ಅಗತ್ಯ ಕ್ರಮ ಕೈಗೊಳ್ಳಬೇಕು. ಶಿಷ್ಟಾಚಾರದಂತೆ ಆಮಂತ್ರಣ ಪತ್ರಿಕೆ ಮುದ್ರಿಸಿ ವಿತರಿಸಬೇಕು. ಕಾರ್ಯಕ್ರಮದ ಸಂದರ್ಭದಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಕಾಪಾಡಲು ಸೂಕ್ತ ಪೊಲೀಸ್ ಬಂದೋಬಸ್ತ್ ವ್ಯವಸ್ಥೆ ಕಲ್ಪಿಸಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು. ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ಬಸಂತಿ ಜಿ. ಮಠ ಅವರು ಜಯಂತಿ ಆಚರಣೆಯ ರೂಪುರೇಷೆಗಳನ್ನು ಸಭೆಗೆ ವಿವರಿಸಿದರು. ಸಭೆಯಲ್ಲಿ ಉಪಸ್ಥಿತರಿದ್ದ ವಾಲ್ಮೀಕಿ ಸಮಾಜದ ಮುಖಂಡರು ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಅಗತ್ಯ ಸಲಹೆ–ಸೂಚನೆಗಳನ್ನು ನೀಡಿದರು.

ಸಿಆರ್‌ಸಿ ರಾಜು ವಿಜಯಪುರ ಕಾರ್ಯಕ್ರಮ ನಿರ್ವಹಿಸಿದರು. ಸಭೆಯಲ್ಲಿ ಪಿಎಸ್‌ಐ ಎಸ್.ಎಂ. ಪಡಶಟ್ಟಿ (ಅ.ವಿ.), ಜಿ.ಜಿ. ಮದರಕಲ್ಲ, ವಾಲ್ಮೀಕಿ ಸಮಾಜದ ಅಧ್ಯಕ್ಷ ಬಸವರಾಜ ದೇವದುರ್ಗ, ಮುಖಂಡರಾದ ಯಮನಪ್ಪ ಬರ್ದೇನಾಳ, ಕಾಶಿನಾಥ ಪಾಟೀಲ, ಕುಮಾರ ಅಸ್ಕಿ, ಹಣಮಂತ ಮೇಲಿನಮನಿ, ಅಶೋಕ ಅಸ್ಕಿ, ಬಸ್ಸು ಮಾದರ, ಗೋಪಾಲ ಕಟ್ಟಿಮನಿ, ಸಾಹೇಬಣ್ಣ ತಳಹಳ್ಳಿ, ಮಡಿವಾಳಪ್ಪ ನಾಯ್ಕೋಡಿ (ಬೋಳವಾಡ), ಕೃಷಿ ಅಧಿಕಾರಿ ಮಹೇಶ ಜೋಶಿ, ಬಿಆರ್‌ಸಿ ಕಾಶಿನಾಥ ಸಜ್ಜನ, ಉಪಖಜಾನೆ ಅಧಿಕಾರಿ ಬಿರಾದಾರ, ಸಾರಿಗೆ ಇಲಾಖೆಯ ಬಸನಗೌಡ ಚೋಕಾವಿ, ಪುರಸಭೆಯ ಇಂಜಗನೇರಿ, ಎಪಿಎಂಸಿ ಸಹಾಯಕಿ ಎಸ್.ಆರ್. ಮಠ, ಕಂದಾಯ ಇಲಾಖೆಯ ಮುನ್ನಾ ಅತ್ತಾರ, ನಿಲಯ ಪಾಲಕರಾದ ಎಸ್.ಎನ್. ಮಲ್ಲಾಡೆ, ಎಸ್.ಎಂ. ಕಲಬುರ್ಗಿ, ಗ್ರಂಥಾಲಯ ಪಾಲಕ ಕುಲಕರ್ಣಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಮಾಜದ ಮುಖಂಡರು ಉಪಸ್ಥಿತರಿದ್ದರು.

ವಚನ ದರ್ಶನ

ಸಂಸಾರವೆಂಬ ಬಲೆಯಲ್ಲಿ ಸಿಲುಕಿದೆನಯ್ಯಾ,ಎನ್ನುವನು ಕಾಯಯ್ಯಾ, ಕಾಯಯ್ಯಾ!ಹುರುಳಿಲ್ಲ! ಹುರುಳಿಲ್ಲ!ಶಿವಧೋ! ಶಿವಧೋ! ಮಹಾದಾನಿ ಕೂಡಲಸಂಗಮದೇವಾ

ಸಂಸಾರವೆಂಬ ಬಲೆಯಲ್ಲಿ ಸಿಲುಕಿದೆನಯ್ಯಾ" ಎಂಬುದು ವಿಶ್ವಗುರು ಬಸವಣ್ಣನವರು ರಚಿಸಿರುವ ಅತ್ಯಂತ ಪ್ರಸಿದ್ಧವಾದ ವಚನವಾಗಿದೆ.

ಸಂಸಾರವೆಂಬ ಬಲೆ ಬಸವಣ್ಣನವರು ಲೌಕಿಕ ಜೀವನ ಅಥವಾ ಸಂಸಾರವನ್ನು ಒಂದು 'ಬಲೆ'ಗೆ ಹೋಲಿಸಿದ್ದಾರೆ. ಹಕ್ಕಿಯೊಂದು ಒಮ್ಮೆ ಬಲೆಗೆ ಬಿದ್ದರೆ ತಾನಾಗಿಯೇ ಹೊರಬರಲಾರದೆ ಒದ್ದಾಡುವಂತೆ, ಮನುಷ್ಯನು ಕೂಡ ಈ ಮಾಯ ಪ್ರಪಂಚದ ಆಶೆ, ಆಮಿಷ, ಬಂಧನಗಳಿಗೆ ಸಿಲುಕಿ ಒದ್ದಾಡುತ್ತಿದ್ದಾನೆ ಎಂದು ಮಾರ್ಮಿಕವಾಗಿ ಹೇಳಿದ್ದಾರೆ.

ಹುರುಳಿಲ್ಲ
ಈ ಲೌಕಿಕ ಸುಖ-ಭೋಗಗಳಲ್ಲಿ ಯಾವುದೇ ಅಂತಿಮ ಸತ್ಯ ಅಥವಾ ಸಾರವಿಲ್ಲ (ಹುರುಳಿಲ್ಲ). ಇವೆಲ್ಲವೂ ಕ್ಷಣಿಕ ಮತ್ತು ನಶ್ವರ ಎಂಬುದನ್ನು ಅವರು ಸ್ಪಷ್ಟಪಡಿಸಿದ್ದಾರೆ.

ಶರಣಾಗತಿ
ಈ ಬಲೆಯಿಂದ ತನ್ನಷ್ಟಕ್ಕೆ ತಾನೇ ಬಿಡಿಸಿಕೊಳ್ಳಲು ಸಾಧ್ಯವಿಲ್ಲದ ಕಾರಣ, ಬಸವಣ್ಣನವರು ತಮ್ಮ ಆರಾಧ್ಯ ದೈವವಾದ ಕೂಡಲಸಂಗಮದೇವನನ್ನು "ನನ್ನನ್ನು ರಕ್ಷಿಸು, ಕಾಯು" ಎಂದು ಅತ್ಯಂತ ಆರ್ದ್ರತೆಯಿಂದ ಬೇಡಿಕೊಳ್ಳುತ್ತಾರೆ. ಇದು ಭಗವಂತನಿಗೆ ಸಂಪೂರ್ಣವಾಗಿ ಶರಣಾಗುವ ಭಕ್ತಿ ಭಾವವನ್ನು ತೋರ್ಪಡಿಸುತ್ತದೆ. ವಚನಗಳು ಮನುಕುಲದ ದಾರಿದೀಪ ಶರಣು ಶರಣಾರ್ಥಿಗಳು.

ಪಂಪಯ್ಯಸ್ವಾಮಿ ಸಾಲಿಮಠ ಅಂತರಗಂಗಿ-ಸಿಂಧನೂರು. 998094144

ಸ್ಮೈಲ್ಸ್ ಪೈಲ್ಸ್ ಆಸ್ಪತ್ರೆಯಿಂದ ಅ.18 ರಂದು ಉಚಿತ ತಪಾಸಣಾ ಶಿಬಿರ: ಲಿಂಗರಾಜ ಪಾಟೀಲ್ ಹಂಚಿನಾಳ

ನೈಜ್ಯ ದೆಸೆ ನ್ಯೂಸ್

ಸಿಂಧನೂರು: ನಗರದ ಗಂಗಾವತಿ ರಸ್ತೆಯಲ್ಲಿರುವ ಐಕ್ಯೂ ಇಂಟರ್ ನ್ಯಾಷನಲ್ ಸ್ಕೂಲ್ ಮತ್ತು ಕಾಲೇಜಿನಲ್ಲಿ ಅಕ್ಟೋಬರ್ 18, (ಭಾನುವಾರದಂದು ಬೆಳಿಗ್ಗೆ 10 ರಿಂದ ಸಂಜೆ 5 ಗಂಟೆಯ ವರೆಗೂ ಶಾಸಕ ಹಂಪನಗೌಡ ಬಾದರ್ಲಿ ಅಭಿಮಾನಿಗಳ ಬಳಗದ ವತಿಯಿಂದ ಉಚಿತ ಮೂಲವ್ಯಾಧಿ (ಪೈಲ್ಸ್) ತಪಾಸಣೆ ಶಿಬಿರವನ್ನು ಏರ್ಪಡಿಸಲಾಗಿದೆ ಎಂದು ಕಾಂಗ್ರೆಸ್ ಮುಖಂಡ ಲಿಂಗರಾಜ ಪಾಟೀಲ್ ಹಂಚಿನಾಳ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಶುಕ್ರವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಡಾ.ಪರಮೇಶ್ವರ ಸಿಎಂ ನೇತೃತ್ವದಲ್ಲಿ 8 ಜನ ನುರಿತ ವೈದ್ಯರು ಹಾಗೂ ಸಿಬ್ಬಂದಿ ಸೇರಿದಂತೆ ಮಹಿಳಾ ವೈದ್ಯರು ಇರಲಿದ್ದು, ಮಹಿಳಾ ರೋಗಿಗಳಿಗೆ ಮಹಿಳಾ ವೈದ್ಯಾಧಿಕಾರಿಗಳು ಶಿಬಿರದ ಕಾರ್ಯಕ್ರಮದಲ್ಲಿ ಸಮಾಲೋಚನೆ ನಡೆಸಲಾಗುವುದು ಎಂದರು.



ಪೈಲ್ಸ್, ಫಿಶರ್ ಮತ್ತು ಫಿಸ್ತುಲಾದಂತಹ ರೋಗಿಗಳಿಗೆ ಕರ್ನಾಟಕದಲ್ಲಿ ನೋವು ಇಲ್ಲದೆಯೇ ಚಿಕಿತ್ಸೆಯನ್ನು ನೀಡಿ, ರೋಗ ವಾಸಿ ಮಾಡಿದವರಲ್ಲಿ ಮೊದಲಿಗರು. ಸಾವಿರಾರು ಜನರಿಗೆ ರೋಗ ವಾಸಿ ಮಾಡಿದ್ದಾರೆ. ರಾಜ್ಯದಾದ್ಯಂತ ಉಚಿತ ಮೂಲವ್ಯಾಧಿ (ಪೈಲ್ಸ್) ತಪಾಸಣೆ ಶಿಬಿರವನ್ನು ಹಮ್ಮಿಕೊಳ್ಳುತ್ತಾ ಬಂದಿದ್ದು, ಇದು ಸಿಂಧನೂರಿನಲ್ಲಿ 70ನೇ ಶಿಬಿರವಾಗಿದೆ. ಇದರ ಉದ್ದೇಶ ಯಾವುದೇ ಕಾರಣಕ್ಕೂ ಜನರು ಪೈಲ್ಸ್ ಖಾಯಿಲೆಯಿಂದ ಬಳಲಿ ಸಾವನ್ನಪ್ಪಬಾರದೆಂಬ ಉದ್ದೇಶ ಹೊಂದಿದೆ. ಹಾಗಾಗಿ ಪೈಲ್ಸ್ ರೋಗಿಗಳು ಭಾಗವಹಿಸಿ ಯಾವುದೇ ಸಂಕೋಚ ಪಡದೇ ಚಿಕಿತ್ಸೆ ಪಡೆದು ಸದುಪಯೋಗ ಪಡೆದುಕೊಳ್ಳಬೇಕು.

ನಗರದ ಕೇಂದ್ರ ಬಸ್ ನಿಲ್ದಾಣದಿಂದ ಐಕ್ಯೂ ಇಂಟರ್ ನ್ಯಾಷನಲ್ ಸ್ಕೂಲ್‌ನವರೆಗೂ ಉಚಿತವಾಗಿ ಬಸ್ಸಿನ ವ್ಯವಸ್ಥೆಯನ್ನು ಕಲ್ಪಿಸಿದೆ. ಉಚಿತ ಕಾರ್ಯಕ್ರಮದಲ್ಲಿ ಉಪಾಹಾರದ ವ್ಯವಸ್ಥೆಯನ್ನು ಮಾಡಲಾಗಿದೆ ಎಂದರು ಆಯೋಜಕರು ತಿಳಿಸಿದರು.

ಈ ಸಂದರ್ಭದಲ್ಲಿ: ತಿಮ್ಮಣ್ಣ ಸಾಹುಕಾರ್ ಕುರುಕುಂದಿ, ಶಿವರಾಜ ಪಾಟೀಲ್ ಗುಂಜಳ್ಳಿ, ಅಮರೇಗೌಡ ಮಲ್ಲಾಪುರ, ಬಸವರಾಜಗೌಡ ಅಮರಾಪೂರು, ಆದನಗೌಡ ಎಲೆಕೂಡ್ಲಿಗಿ, ಚಂದ್ರು, ದೀಪಕ್ ಸೇರಿದಂತೆ ಇನ್ನಿತರರು ಇದ್ದರು.

ಮನಸ್ಸು ನಿರ್ಮಲವಾಗಿದ್ದರೆ ಮಾತ್ರ ದೇವರನ್ನು ಕಾಣಲು ಸಾಧ್ಯ: ಶ್ರೀ ದಿವ್ಯಜ್ಞಾನಾನಂದಗಿರಿ ಸ್ವಾಮೀಜಿ

ನೈಜ್ಯ ದೆಸೆ ನ್ಯೂಸ್

ಮಾನ್ವಿ: ಮನಸ್ಸು ನಿರ್ಮಲವಾಗಿದ್ದರೆ ಮಾತ್ರ ದೇವರನ್ನು ಕಾಣಲು ಸಾಧ್ಯ. ನೀರು ತಿಳಿಯಾಗಿದ್ದರೆ ಅದರಲ್ಲಿ ನಮ್ಮ ಮುಖ ಕಾಣಿಸುತ್ತದೆ; ಅದೇ ನೀರು ಕಲುಷಿತವಾಗಿದ್ದರೆ ಮುಖ ಕಾಣುವುದಿಲ್ಲ. ಅದೇ ರೀತಿ ನಮ್ಮ ಮನಸ್ಸು ತಿಳಿಯಾಗಿ, ನಿರ್ಮಲವಾಗಿದ್ದರೆ ಮಾತ್ರ ದೇವರನ್ನು ಕಾಣಲು ಸಾಧ್ಯ ಎಂದು ತೊಗಟವೀರ ಕ್ಷತ್ರಿಯ ಸಮಾಜದ ಗುರುಗಳಾದ ದೊಡ್ಡಬಳ್ಳಾಪುರ ತಾಲೂಕಿನ ತಪಸೀಹಳ್ಳಿ ಪುಷ್ಪಾಂಡಜ ಮಹರ್ಷಿ ಆಶ್ರಮದ ಪೂಜ್ಯ ಶ್ರೀ ಶ್ರೀ ಶ್ರೀ ದಿವ್ಯಜ್ಞಾನಾನಂದಗಿರಿ ಸ್ವಾಮೀಜಿಗಳು ಹೇಳಿದರು.

ಪಟ್ಟಣದ ತೊಗಟವೀರ ಕ್ಷತ್ರಿಯ ಸಮಾಜದ ವತಿಯಿಂದ ಆಯೋಜಿಸಿದ್ದ ಶ್ರೀ ಚೌಡೇಶ್ವರಿ ದೇವಿಯ ನವರಾತ್ರಿ ಮಹೋತ್ಸವದ ಅಂಗವಾಗಿ ಮಾನ್ವಿಗೆ ಆಗಮಿಸಿದ್ದ ಶ್ರೀಗಳು, ಭಕ್ತರಿಗೆ ಆಶೀರ್ವಚನ ನೀಡಿ ಆಧ್ಯಾತ್ಮಿಕ ಜೀವನದ ಜೊತೆಗೆ ಸಾಮಾಜಿಕ ಜವಾಬ್ದಾರಿಯ ಮಹತ್ವವನ್ನು ತಿಳಿಸಿದರು.



ಪ್ರತಿಯೊಬ್ಬರೂ ತಾವು ಮಾಡುತ್ತಿರುವ ವೃತ್ತಿಯನ್ನು ಶ್ರದ್ಧೆ ಮತ್ತು ಪ್ರಾಮಾಣಿಕತೆಯಿಂದ ನಿರ್ವಹಿಸಿ ಹಣ ಸಂಪಾದಿಸಬೇಕು. ಸಂಪಾದಿಸಿದ ಆದಾಯದಲ್ಲಿ ಸ್ವಲ್ಪ ಭಾಗವನ್ನು ಸಮಾಜದ ಒಳಿತಿಗಾಗಿ ಮೀಸಲಿಡಬೇಕು. ಸಮಾಜದ ಅಭಿವೃದ್ಧಿ ಹಾಗೂ ಧಾರ್ಮಿಕ ಕಾರ್ಯಗಳಿಗೆ ಪ್ರತಿಯೊಬ್ಬರೂ ತಮ್ಮ ಕೈಲಾದ ಕೊಡುಗೆ ನೀಡುವ ಮನೋಭಾವ ಬೆಳೆಸಿಕೊಳ್ಳಬೇಕು ಎಂದು ಸ್ವಾಮೀಜಿಗಳು ಕರೆ ನೀಡಿದರು.

ಮಾನ್ವಿ ಪಟ್ಟಣದಲ್ಲಿ ನೂತನವಾಗಿ ನಿರ್ಮಾಣವಾಗುತ್ತಿರುವ ಶ್ರೀ ಚೌಡೇಶ್ವರಿ ದೇವಿಯ ಶಿಲಾ ಮಂಟಪವನ್ನು ವೀಕ್ಷಿಸಿದ ಶ್ರೀ ದಿವ್ಯಜ್ಞಾನಾನಂದಗಿರಿ ಸ್ವಾಮೀಜಿಗಳು ಹರ್ಷ ವ್ಯಕ್ತಪಡಿಸಿದರು. ಪಟ್ಟಣದಲ್ಲಿ ಸಮುದಾಯದ ಜನಸಂಖ್ಯೆ ಸೀಮಿತವಾಗಿದ್ದರೂ, ಸಮಾಜದ ಬಂಧುಗಳು ಒಗ್ಗಟ್ಟಿನಿಂದ ಸಂಪೂರ್ಣ ಕಲ್ಲಿನಿಂದ ಬೃಹತ್ ದೇವಾಲಯವನ್ನು ನಿರ್ಮಿಸುತ್ತಿರುವುದು ಸಂತಸದ ಸಂಗತಿ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ದೇವಾಲಯ ನಿರ್ಮಾಣವು ಸಮಾಜದ ಭಕ್ತಿ, ಒಗ್ಗಟ್ಟು ಹಾಗೂ ಧಾರ್ಮಿಕ ಪರಂಪರೆಯ ಪ್ರತೀಕವಾಗಿದೆ. ಈ ಮಹತ್ವದ ಕಾರ್ಯವನ್ನು ಪೂರ್ಣಗೊಳಿಸಲು ಸಮಾಜದ ಪ್ರತಿಯೊಬ್ಬರೂ ಕೈಜೋಡಿಸಬೇಕು. ತಮ್ಮ ಸಾಮರ್ಥ್ಯಕ್ಕೆ ಅನುಗುಣವಾಗಿ ದೇಣಿಗೆ ನೀಡಿ ದೇವಾಲಯದ ನಿರ್ಮಾಣ ಕಾರ್ಯಕ್ಕೆ ಸಹಕರಿಸಬೇಕು ಎಂದು ಸ್ವಾಮೀಜಿಗಳು ಮನವಿ ಮಾಡಿದರು.

ಮಹೋತ್ಸವದ ಅಂಗವಾಗಿ ಉಪ್ಪಳದ ಜಗದೀಶ ಶಾಸ್ತ್ರಿಗಳು ಸಾಲಿಮಠ ಅವರು ಶ್ರೀ ದೇವಿ ಮಹಾತ್ಮೆ ಪುರಾಣ ಪ್ರವಚನ ನೀಡಿದರು. ಗದಗದ ಹೆಚ್.ಕೆ. ವೀರೇಶ್ವರ ಪುಣ್ಯಾಶ್ರಮದ ರಮೇಶ್ ಕುಮಾರ್ ಗವಾಯಿಗಳು ಪಠಣಕಾರರಾಗಿ ಹಾಗೂ ರಾಯಚೂರಿನ ಎ.ಎಸ್. ಸುರೇಶ್ ಕುಮಾರ್ ತಬಲಾ ವಾದಕರಾಗಿ ಧಾರ್ಮಿಕ ಕಾರ್ಯಕ್ರಮಕ್ಕೆ ಸಂಗೀತ ಸೇವೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ತೊಗಟವೀರ ಕ್ಷತ್ರಿಯ ಸಂಘದ ಉಪಾಧ್ಯಕ್ಷ ಜಿ. ನಾಗರಾಜ್, ಗೌರವಾಧ್ಯಕ್ಷ ಜಿ. ಸಿನಾಪತಿ, ಪ್ರಧಾನ ಕಾರ್ಯದರ್ಶಿ ಹೆಚ್.ಟಿ. ಪ್ರಕಾಶ್ ಬಾಬು, ಸಹ ಕಾರ್ಯದರ್ಶಿ ಆರ್. ಸುಭಾಷ್ ಚಂದ್ರ, ಖಜಾಂಚಿ ಹೆಚ್.ಟಿ. ದತ್ತಾತ್ರೇಯ, ಯುವಕ ಸಂಘದ ಗೌರವಾಧ್ಯಕ್ಷ ಎಂ. ವರಪ್ರಸಾದ್, ಅಧ್ಯಕ್ಷ ಚೌಡಂ ರಾಜೇಶ್, ಉಪಾಧ್ಯಕ್ಷ ನಾಗರಾಜ್ ಕೆ. ಎನ್., ಕಾರ್ಯದರ್ಶಿ ವೀರೇಶ್ ಪಿರುಮಾಳ್, ಸಮಾಜದ ಮುಖಂಡರಾದ ಡಿ. ವೀರೇಶ್, ರಮೇಶ್ ಬಂಡಾರಿ, ಕೆ.ಈ. ನರಸಿಂಹ, ಪಿ. ನರಸಿಂಹರಾಜು, ಆರ್. ಬೀಸನ್ ಕುಮಾರ್, ಸಿ. ಶಿವರಾಜ್, ವೆಂಕಟೇಶ್ ನೇಕಾರ್, ಶಿವಕುಮಾರ್ ಚಲ್ಮಲ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಶಿಕ್ಷಣ ಕ್ಷೇತ್ರದಲ್ಲಿ ಕ್ರಾಂತಿ ಮಾಡುವ ಸಂಕಲ್ಪವೇ ಜೆಎಸ್ಎಸ್ ಸಂಸ್ಥೆಗಳ ಹುಟ್ಟಿಗೆ ಕಾರಣ: ಶ್ರೀ ಶಿವರಾತ್ರಿ ದೇಶೀಕೇಂದ್ರ ಸ್ವಾಮೀಜಿ

ನೈಜ್ಯ ದೆಸೆ ನ್ಯೂಸ್

ತಾಂಡವಪುರ ಅಕ್ಟೋಬರ್ 16ಜಗದ್ಗುರು ರಾಜೇಂದ್ರ ಶ್ರೀಗಳು ಕಾಶಿಯಿಂದ ಹಿಂತಿರುಗಿದ ಮೇಲೆ ಶಿಕ್ಷಣ ಕ್ಷೇತ್ರದಲ್ಲಿ ಕ್ರಾಂತಿ ಮಾಡುವ ಸಂಕಲ್ಪ ಹೊಂದಿದ್ದರಿಂದಲೇ ಜೆ ಎಸ್ ಸಮೂಹ ಸಂಸ್ಥೆಗಳು ತಲೆ ಎತ್ತಿವೆ ಎಂದು ಸುತ್ತೂರು ಮಠಾಧ್ಯಕ್ಷ ಶ್ರೀ ಶಿವರಾತ್ರಿ ದೇಶೀಕೇಂದ್ರ ಸ್ವಾಮೀಜಿ ರವರು ಹೇಳಿದರು.



ಅವರು ನಂಜನಗೂಡಿನ ಜೆಎಸ್ಎಸ್ ಮಂಗಳ ಮಂಟಪದಲ್ಲಿ ಜೆಎಸ್ಎಸ್ ಶಿಕ್ಷಣ ಸಂಸ್ಥೆಗಳು ಹಾಗೂ ವಿವಿಧ ಸಂಘ ಸಂಸ್ಥೆಗಳು ಮತ್ತು ಭಕ್ತವೃಂದದಿಂದ ಆಯೋಜಿಸಿದ್ದ ಡಾ.ಶಿವರಾತ್ರಿ ರಾಜೇಂದ್ರ ಸ್ವಾಮೀಜಿಯವರ 111ನೇ ಜಯಂತಿ ಮಹೋತ್ಸವ ಸಮಾರಂಭವನ್ನು ಉದ್ಘಾಟನೆ ಹಾಗೂ ರಾಜೇಂದ್ರ ಶ್ರೀಗಳ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಶ್ರೀಗಳು ಸಮಾರಂಭದಲ್ಲಿ ನೆರೆದಿದ್ದ ಸರ್ವರಿಗೆ ಆಶೀರ್ವಚನ ನೀಡುತ್ತಾ ಮಾತನಾಡಿದ ಸುತ್ತೂರು ಶ್ರೀಗಳು ಜೀವನದಲ್ಲಿ ತಮಗೆ ಯಾವುದನ್ನು ದೊರಕಿಸಿಕೊಳ್ಳಲು ಸಾಧ್ಯವಾಗಲಿಲ್ಲವೋ ಸಮಾಜದಲ್ಲಿ ಯಾರಿಗೆ ದೊರಕಿಸಿಕೊಳ್ಳಲು ಸಾಧ್ಯವಿಲ್ಲವೋ ಅವರು ಬದುಕನ್ನು ರೂಪಿಸಿಕೊಳ್ಳಲು ಅವಕಾಶ ಮಾಡಿಕೊಡುವುದು ಎಂದು ರಾಜೇಂದ್ರ ಶ್ರೀಗಳು ಸಂಕಲ್ಪ ಮಾಡಿದ ಕಾರಣದಿಂದಾಗಿಯೇ ಜೆಎಸ್ಎಸ್ ಸಮೂಹಗಳ ಸಂಸ್ಥೆ ವಿಶ್ವದ್ಯಂತ ತಲೆ ಎತ್ತಿದೆ.ಮಾನವೀಯ ನೆಲೆಗಟ್ಟಿನಲ್ಲಿ ರಾಜೇಂದ್ರ ಸ್ವಾಮೀಜಿಯವರು ಮನುಕುಲಕ್ಕೆ ಸಲ್ಲಿಸಿದ ಸೇವೆ ಅಮೂಲ್ಯವಾಗಿದ್ದು ಜನರ ಭಾವನೆಗಳಿಗೆ ಸ್ಪಂದಿಸುವ ಮೂಲಕ ಶಿಕ್ಷಣ, ಆರೋಗ್ಯ ಹಾಗೂ ದಾಸೋಹ ಕ್ಷೇತ್ರದಲ್ಲಿ ಸಮಾಜಕ್ಕೆ ಗಣನೀಯವಾಗಿ ನೆರವಾಗಿದ್ದಾರೆ. ಅವರ ಜಯಂತಿ ಮಹೋತ್ಸವದ ಸಮಯದಲ್ಲಿ ಸಾಂಸ್ಕೃತಿಕ, ಕ್ರೀಡಾ ಹಾಗೂ ಶೈಕ್ಷಣಿಕ ಕ್ಷೇತ್ರಗಳ ಸಾಧಕ ವಿದ್ಯಾರ್ಥಿಗಳನ್ನು ಗುರ್ತಿಸಿ ಪ್ರೋತ್ಸಾಹಿಸುವ ಮೂಲಕ ಪ್ರೋತ್ಸಾಹಿಸುತ್ತಿರುವುದು ಉತ್ತಮ ಕಾರ್ಯ ಎಂದು ಶ್ರೀಗಳು ಮೆಚ್ಚುಗೆ ವ್ಯಕ್ತಪಡಿಸಿದರು. ಶಾಸಕ ದರ್ಶನ್ ಧ್ರುವನಾರಾಯಣ ಮಾತನಾಡಿ, ಕೆಲವು ತಿಂಗಳ ಅಂತರದಲ್ಲಿ ತಂದೆ ತಾಯಿಯನ್ನು ಕಳೆದುಕೊಂಡ ನಮ್ಮ ಕುಟುಂಬಕ್ಕೆ ಆಸರೆಯಾಗಿ ನಮಗೆ ಮಾರ್ಗದರ್ಶನ ಹಾಗೂ ಧೈರ್ಯವನ್ನು ತುಂಬಿದ್ದು ಸುತ್ತೂರಿನ ಶ್ರೀಗಳು ಇಂದಿಗೂ ನನ್ನ ರಾಜಕೀಯ ಜೀವನಕ್ಕೆ ಅವರೇ ಮಾರ್ಗದರ್ಶಕರು ಸಮಾಜಸೇವೆ ಹಾಗೂಸರ್ಕಾರಿ ಕೆಲಸಗಳನ್ನು ಮಾಡುವ ಬಗ್ಗೆ ನನಗೆ ಮಾರ್ಗದರ್ಶನ ನೀಡುತ್ತಾ ಮಾಡುತ್ತಿರುತ್ತಾರೆ.ಬಸವೇಶ್ವರರ ತತ್ವಾದರ್ಶಗಳನ್ನು ಮೈಗೂಡಿಸಿಕೊಂಡು ಕಾಯಕ ಹಾಗೂ ದಾಸೋಹದ ಮಹತ್ವವನ್ನು ಸಮಾಜಕ್ಕೆ ತಿಳಿಸಿಕೊಡುವ ಜೊತೆಗೆ ಗ್ರಾಮೀಣ ಪ್ರದೇಶದಲ್ಲಿ ಶಿಕ್ಷಣ ಸಂಸ್ಥೆಗಳನ್ನು ತೆರೆದು ಲಕ್ಷಾಂತರ ಮಂದಿಗೆ ಅಕ್ಷರದ ಬೆಳಕನ್ನು ನೀಡಿದ ರಾಜೇಂದ್ರ ಸ್ವಾಮೀಜಿಯವರ ದೂರದೃಷ್ಟಿತ್ವದ ಫಲವಾಗಿ ಅಕ್ಷರ, ಅನ್ನ ಹಾಗೂ ಆರೋಗ್ಯ ಸೇವೆಗಳು ಜೆಎಸ್ಎಸ್ ಸಂಸ್ಥೆಯ ಮೂಲಕ ಜನರಿಗೆ ತಲುಪುತ್ತಿದೆ ಎಂದು ಶಾಸಕರು ರಾಜೇಂದ್ರ ಶ್ರೀಗಳನ್ನು ಸ್ಮರಿಸಿಕೊಂಡರು.

ಮೈಸೂರು ದಸರಾ ಮಹೋತ್ಸವದ ಪ್ರತಿಷ್ಠಿತ ವೇದಿಕೆಯಲ್ಲಿ ತುರುವಿಹಾಳದ ಶರಣಬಸವ ಹಳ್ಳಿ ಗವಾಯಿಗಳ ಗಾಯನದ ಕಂಪು!

ನಾಡಹಬ್ಬದ ಸಾಂಸ್ಕೃತಿಕ ವೇದಿಕೆಯಲ್ಲಿ ಸಂಗೀತ ಸೇವೆ ಸಲ್ಲಿಸಿದ ಕಲಾವಿದ ತುರುವಿಹಾಳದ ಕೀರ್ತಿ ಹೆಚ್ಚಿಸಿದ ಗವಾಯಿಗಳು

ನೈಜ್ಯ ದೆಸೆ ನ್ಯೂಸ್

ತುರುವಿಹಾಳ: ನಾಡಿನ ಸಾಂಸ್ಕೃತಿಕ ವೈಭವ, ಪರಂಪರೆ ಹಾಗೂ ಕಲಾ ಶ್ರೀಮಂತಿಕೆಯ ಪ್ರತೀಕವಾಗಿರುವ ವಿಶ್ವವಿಖ್ಯಾತ ಮೈಸೂರು ದಸರಾ ಮಹೋತ್ಸವದ ಪ್ರತಿಷ್ಠಿತ ವೇದಿಕೆಯಲ್ಲಿ ಸಂಗೀತ ಸೇವೆ ಸಲ್ಲಿಸುವ ಮೂಲಕ ತುರುವಿಹಾಳದ ಹೆಮ್ಮೆಯ ಕಲಾವಿದ ಶರಣಬಸವ ಹಳ್ಳಿ ಗವಾಯಿಗಳು ಗಮನ ಸೆಳೆದಿದ್ದಾರೆ.

ತಮ್ಮ ಗಾಯನ ಕಲೆಯ ಮೂಲಕ ಸಂಗೀತ ಕ್ಷೇತ್ರದಲ್ಲಿ ಗುರುತಿಸಿಕೊಂಡಿರುವ ಅವರು, ನಾಡಿನ ಪ್ರಸಿದ್ಧ ಸಾಂಸ್ಕೃತಿಕ ಉತ್ಸವದ ವೇದಿಕೆಯಲ್ಲಿ ಗಾಯನ ಸೇವೆ ಸಲ್ಲಿಸಿರುವುದು ತುರುವಿಹಾಳ ಪಟ್ಟಣ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ಸಂಗೀತಾಸಕ್ತರಲ್ಲಿ ಸಂತಸ ಮತ್ತು ಹೆಮ್ಮೆಯನ್ನು ಮೂಡಿಸಿದೆ.

ಮೈಸೂರು ದಸರಾ ಮಹೋತ್ಸವವು ಕರ್ನಾಟಕದ ಐತಿಹಾಸಿಕ ಪರಂಪರೆ, ಸಂಸ್ಕೃತಿ, ಕಲೆ, ಸಾಹಿತ್ಯ ಹಾಗೂ ಸಂಗೀತದ ವೈಭವವನ್ನು ಜಗತ್ತಿಗೆ ಪರಿಚಯಿಸುವ ಮಹತ್ವದ ಉತ್ಸವವಾಗಿದೆ. ಇಂತಹ ನಾಡಿನ ಹೆಮ್ಮೆಯ ವೇದಿಕೆಯಲ್ಲಿ ಸಂಗೀತ ಸೇವೆ ಸಲ್ಲಿಸುವ ಅವಕಾಶ ದೊರೆಯುವುದು ಪ್ರತಿಯೊಬ್ಬ ಕಲಾವಿದನಿಗೂ ಹೆಮ್ಮೆಯ ಸಂಗತಿಯಾಗಿದೆ. ಈ ಗೌರವದ ವೇದಿಕೆಯಲ್ಲಿ ಶರಣಬಸವ ಹಳ್ಳಿ ಗವಾಯಿಗಳು ತಮ್ಮ ಗಾಯನದ ಮೂಲಕ ಕಲಾಸೇವೆಯಲ್ಲಿ ತೊಡಗಿಸಿಕೊಂಡಿರುವುದು ಅವರ ಸಂಗೀತಾಸಕ್ತಿ, ಕಲಾ ಪ್ರತಿಭೆ ಹಾಗೂ ಸಾಧನೆಯ ಮಹತ್ವವನ್ನು ಸಾರುತ್ತದೆ.

ಸಂಗೀತ ಪರಂಪರೆಯ ಮೂಲಕ ಗುರುತಿಸಿಕೊಂಡ ಕಲಾವಿದ ಸಂಗೀತವು ಕೇವಲ ಮನರಂಜನೆಯ ಸಾಧನವಲ್ಲ; ಅದು ಮನಸ್ಸಿಗೆ ನೆಮ್ಮದಿ ನೀಡುವ, ಸಂಸ್ಕೃತಿಯನ್ನು ಉಳಿಸಿ ಬೆಳೆಸುವ ಹಾಗೂ ಜನರನ್ನು ಭಾವನಾತ್ಮಕವಾಗಿ ಬೆಸೆಯುವ ಶಕ್ತಿಯುತ ಕಲೆಯಾಗಿದೆ. ಇಂತಹ ಸಂಗೀತ ಕ್ಷೇತ್ರದಲ್ಲಿ ತಮ್ಮದೇ ಆದ ಆಸಕ್ತಿ ಮತ್ತು ಅಭಿರುಚಿಯೊಂದಿಗೆ ಗುರುತಿಸಿಕೊಂಡಿರುವ ಶರಣಬಸವ ಹಳ್ಳಿ ಗವಾಯಿಗಳು, ಮೈಸೂರು ದಸರಾ ಮಹೋತ್ಸವದಂತಹ ಪ್ರತಿಷ್ಠಿತ ವೇದಿಕೆಯಲ್ಲಿ ಗಾಯನ ಸೇವೆ ಸಲ್ಲಿಸಿರುವುದು ವಿಶೇಷ ಮಹತ್ವ ಪಡೆದಿದೆ.



ನಾಡಿನ ವಿವಿಧ ಭಾಗಗಳಿಂದ ಆಗಮಿಸುವ ಕಲಾವಿದರು ತಮ್ಮ ಪ್ರತಿಭೆಯನ್ನು ಪ್ರದರ್ಶಿಸುವ ದಸರಾ ವೇದಿಕೆಯಲ್ಲಿ ತುರುವಿಹಾಳದ ಕಲಾವಿದರೊಬ್ಬರು ಸಂಗೀತ ಸೇವೆ ಸಲ್ಲಿಸಿರುವುದು ಸ್ಥಳೀಯ ಕಲಾವಿದರಿಗೆ ಪ್ರೇರಣೆ ನೀಡುವ ಸಂಗತಿಯಾಗಿದೆ. ಗ್ರಾಮೀಣ ಭಾಗಗಳಲ್ಲಿಯೂ ಅಪಾರ ಪ್ರತಿಭಾವಂತ ಕಲಾವಿದರಿದ್ದು, ಅವರಿಗೆ ಸೂಕ್ತ ಅವಕಾಶಗಳು ದೊರೆತಾಗ ತಮ್ಮ ಕಲೆಯ ಮೂಲಕ ನಾಡಿನ ಗಮನ ಸೆಳೆಯಲು ಸಾಧ್ಯ ಎಂಬುದಕ್ಕೆ ಈ ಸಾಧನೆ ಉತ್ತಮ ಉದಾಹರಣೆಯಾಗಿದೆ.

ತುರುವಿಹಾಳದ ಕೀರ್ತಿಗೆ ಮತ್ತೊಂದು ಗರಿ ತುರುವಿಹಾಳ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ಕಲಾ ಪ್ರತಿಭೆಗಳಿಗೆ ಉತ್ತೇಜನ ನೀಡುವ ನಿಟ್ಟಿನಲ್ಲಿ ಇಂತಹ ಸಾಧನೆಗಳು ಮಹತ್ವದ್ದಾಗಿವೆ. ಸ್ಥಳೀಯವಾಗಿ ಗುರುತಿಸಿಕೊಂಡ ಕಲಾವಿದರೊಬ್ಬರು ನಾಡಿನ ವಿಶ್ವವಿಖ್ಯಾತ ದಸರಾ ಮಹೋತ್ಸವದ ವೇದಿಕೆಯಲ್ಲಿ ಸಂಗೀತ ಸೇವೆ ಸಲ್ಲಿಸಿರುವುದು ಪಟ್ಟಣದ ಜನತೆಗೆ ಹೆಮ್ಮೆಯ ವಿಷಯವಾಗಿದೆ.

ಕಲಾವಿದನ ಸಾಧನೆಯ ಹಿಂದೆ ನಿರಂತರ ಅಭ್ಯಾಸ, ಕಲೆಯ ಮೇಲಿನ ಪ್ರೀತಿ, ಶ್ರದ್ಧೆ ಮತ್ತು ಪರಿಶ್ರಮ ಪ್ರಮುಖ ಪಾತ್ರ ವಹಿಸುತ್ತವೆ. ಸಂಗೀತ ಕ್ಷೇತ್ರದಲ್ಲಿ ಮುಂದುವರಿಯಲು ತಾಳ್ಮೆ, ಶಿಸ್ತು ಹಾಗೂ ನಿರಂತರ ಕಲಿಕೆಯ ಅಗತ್ಯವಿದೆ. ಈ ಹಿನ್ನೆಲೆಯಲ್ಲಿ ಶರಣಬಸವ ಹಳ್ಳಿ ಗವಾಯಿಗಳ ಸಂಗೀತ ಸೇವೆಯು ಯುವ ಪ್ರತಿಭೆಗಳಿಗೆ ತಮ್ಮ ಆಸಕ್ತಿಯ ಕ್ಷೇತ್ರದಲ್ಲಿ ಸಾಧನೆ ಮಾಡಲು ಪ್ರೇರಣೆ ನೀಡುವಂತಿದೆ.

ನಾಡಿನ ಕಲೆ ಮತ್ತು ಸಂಸ್ಕೃತಿಯ ಉಳಿವಿಗೆ ಕಲಾವಿದರ ಕೊಡುಗೆ ಕರ್ನಾಟಕವು ಸಂಗೀತ, ಸಾಹಿತ್ಯ, ನೃತ್ಯ ಹಾಗೂ ಜನಪದ ಕಲೆಗಳ ಶ್ರೀಮಂತ ಪರಂಪರೆಯನ್ನು ಹೊಂದಿರುವ ನಾಡಾಗಿದೆ. ಈ ಪರಂಪರೆಯನ್ನು ಮುಂದಿನ ಪೀಳಿಗೆಗೆ ಪರಿಚಯಿಸುವಲ್ಲಿ ಕಲಾವಿದರ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ವಿಶೇಷವಾಗಿ ಗ್ರಾಮೀಣ ಪ್ರದೇಶಗಳಲ್ಲಿ ಸಂಗೀತದ ಮೇಲಿನ ಆಸಕ್ತಿಯನ್ನು ಬೆಳೆಸುವುದು, ಪ್ರತಿಭಾವಂತ ಕಲಾವಿದರನ್ನು ಗುರುತಿಸುವುದು ಮತ್ತು ಅವರಿಗೆ ಸೂಕ್ತ ವೇದಿಕೆಗಳನ್ನು ಒದಗಿಸುವುದು ಇಂದಿನ ಅಗತ್ಯವಾಗಿದೆ.

ಮೈಸೂರು ದಸರಾ ಮಹೋತ್ಸವದಂತಹ ಸಾಂಸ್ಕೃತಿಕ ವೇದಿಕೆಗಳು ಕಲಾವಿದರಿಗೆ ತಮ್ಮ ಪ್ರತಿಭೆಯನ್ನು ಪ್ರದರ್ಶಿಸಲು ಅವಕಾಶ ಕಲ್ಪಿಸುವುದರ ಜೊತೆಗೆ, ಕರ್ನಾಟಕದ ಕಲಾ ಪರಂಪರೆಯ ವೈವಿಧ್ಯತೆಯನ್ನು ಪರಿಚಯಿಸುತ್ತವೆ. ಇಂತಹ ವೇದಿಕೆಯಲ್ಲಿ ಶರಣಬಸವ ಹಳ್ಳಿ ಗವಾಯಿಗಳು ಸಂಗೀತ ಸೇವೆ ಸಲ್ಲಿಸಿರುವುದು ತುರುವಿಹಾಳದ ಸಾಂಸ್ಕೃತಿಕ ಹೆಗ್ಗಳಿಕೆಯನ್ನು ಹೆಚ್ಚಿಸಿದೆ.

ಕಲಾವಿದನ ಸಾಧನೆಗೆ ಸಾರ್ವಜನಿಕರ ಮೆಚ್ಚುಗೆ ಮೈಸೂರು ದಸರಾ ಮಹೋತ್ಸವದಲ್ಲಿ ಸಂಗೀತ ಸೇವೆ ಸಲ್ಲಿಸಿದ ಶರಣಬಸವ ಹಳ್ಳಿ ಗವಾಯಿಗಳಿಗೆ ತುರುವಿಹಾಳದ ಸಂಗೀತಾಭಿಮಾನಿಗಳು ಹಾಗೂ ಕಲಾಪ್ರೇಮಿಗಳು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ಸ್ಥಳೀಯ ಪ್ರತಿಭೆಗಳು ರಾಜ್ಯಮಟ್ಟದ ಪ್ರತಿಷ್ಠಿತ ವೇದಿಕೆಗಳಲ್ಲಿ ಅವಕಾಶ ಪಡೆದು ತಮ್ಮ ಕಲೆಯ ಮೂಲಕ ಗುರುತಿಸಿಕೊಳ್ಳುವುದು ಸಂತಸದ ಸಂಗತಿಯಾಗಿದೆ ಎಂಬ ಅಭಿಪ್ರಾಯಗಳು ವ್ಯಕ್ತವಾಗಿವೆ.

ಒಟ್ಟಿನಲ್ಲಿ, ವಿಶ್ವವಿಖ್ಯಾತ ಮೈಸೂರು ದಸರಾ ಮಹೋತ್ಸವದ ವೇದಿಕೆಯಲ್ಲಿ ಸಂಗೀತ ಸೇವೆ ಸಲ್ಲಿಸುವ ಮೂಲಕ ಶರಣಬಸವ ಹಳ್ಳಿ ಗವಾಯಿಗಳು ತುರುವಿಹಾಳದ ಹೆಮ್ಮೆಯನ್ನು ಹೆಚ್ಚಿಸಿದ್ದು, ಅವರ ಮುಂದಿನ ಸಂಗೀತ ಪಯಣ ಇನ್ನಷ್ಟು ಯಶಸ್ವಿಯಾಗಲಿ ಹಾಗೂ ಅವರ ಕಲಾಸೇವೆ ನಿರಂತರವಾಗಿ ಮುಂದುವರಿಯಲಿ ಎಂಬುದು ಸಂಗೀತಾಸಕ್ತರ ಆಶಯವಾಗಿದೆ.

ಅ.19ರಿಂದ ಮೂರು ದಿನಗಳ ಕಾಲ ದಸರಾ ಆಚರಣೆ

ಅ.30ಕ್ಕೆ ಸಿಂಧನೂರಿಗೆ ಸಿಎಂ ಡಿಕೆಶಿ ಆಗಮನ ಅಂಬಾದೇವಿ ನೂತನ ಕಟ್ಟಡ ಲೋಕಾರ್ಪಣೆ

ನೈಜ್ಯ ದೆಸೆ ನ್ಯೂಸ್

ಸಿಂಧನೂರು: ಅಕ್ಟೋಬರ್ 19,20,21, ಮೂರು ದಿನಗಳ ಕಾಲ ದಸರಾ ಆಚರಣೆ ಮಾಡಲು ನಿರ್ಧಾರ ಮಾಡಲಾಗಿದೆ. ಈ ಬಾರಿ ಭೀಕರ ಬರಗಾಲ ಇರುವುದರಿಂದ ಮೂರೇ ದಿವಸ ದಸರಾ ಆಚರಣೆ ಆಯೋಜಿಸಲಾಗಿದೆ ಎಂದು ಶಾಸಕ ಹಂಪನಗೌಡ ಬಾದರ್ಲಿ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಅ.16 ಶುಕ್ರವಾರದಂದು ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಅ.19 ರಂದು ಒಳಬಳ್ಳಾರಿ ಗ್ರಾಮದ ತುಂಗಭದ್ರಾ ನದಿಯ ದಡದಲ್ಲಿ ತುಂಗಾಭದ್ರೆಗೆ ಅಂಬಾ ಆರತಿ ಎಂಬ ಕಾರ್ಯಕ್ರಮ ಸಾಯಂಕಾಲ 4:30ಕ್ಕೆ ನೆರವೇರಲಿದೆ. ಕಳೆದ ವರ್ಷ ಮುಕ್ಕುಂದಿ ಗ್ರಾಮದಲ್ಲಿ ಇದ್ದ ವಾರಾಣಸಿ ಅರ್ಚಕರ ತಂಡವೆ ಈ ವರ್ಷವೂ ಕೂಡ ಆಗಮಿಸಿ ತುಂಗಭದ್ರೆಗೆ ಅಂಬಾ ಆರತಿ ನೆರವೇರಿಸಲಿದ್ದಾರೆ.



ತಾಲೂಕಿನ ಎಲ್ಲಾ ಹರಗುರು ಚರಮೂರ್ತಿಗಳ ಸಮ್ಮುಖದಲ್ಲಿ ಈ ದಸರಾ ಕಾರ್ಯಕ್ರಮ ನಡೆಯಲಿದೆ. ಕಳಸ-ಕುಂಭ, ವಾದ್ಯ-ಮೇಳಗಳ ಸಂಗೀತದೊಂದಿಗೆ ಸಹಸ್ರಾರು ಸಂಖ್ಯೆಯಲ್ಲಿ ತಾಲೂಕಿನ ಸಾರ್ವಜನಿಕರು ಭಾಗಿಯಾಗಿ ಈ ಒಂದು ವಿಶೇಷ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಮನವಿ ಮಾಡಿದರು. ಅ.20 ರಂದು ಯುವ ದಸರಾ ಕಾರ್ಯಕ್ರಮವನ್ನು ತಾಲೂಕು ಕ್ರೀಡಾಕೂಟದಲ್ಲಿ ಸಾಯಂಕಾಲ ಖ್ಯಾತ ಗಾಯಕರಾದ ಚಂದನಶೆಟ್ಟಿ, ಹನುಮಂತ ಲಮಾಣಿ, ಸುಪ್ರಿಯಾ, ಸೇರಿದಂತೆ ಅನೇಕ ಗಾಯಕರಿಂದ ಸಂಗೀತದ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಅ.21 ರಂದು ಜಂಭು-ಸವಾರಿ ಕಾರ್ಯಕ್ರಮ ನಡೆಯಲಿದೆ ಸಂಪ್ರದಾಯದಂತೆ ಆನೆ ಮೇಲೆ ಅಂಬಾದೇವಿ ಮೆರವಣಿಗೆ ಈ ಮೆರವಣಿಗೆಯಲ್ಲಿ ರಾಷ್ಟ್ರದಾದ್ಯಂತ ಹೆಸರು ಮಾಡಿರುವ ಪುಣೆಯ ಡೊಳ್ಳು ಕುಣಿತದ ಕಲಾ ತಂಡದಿಂದ ಡೊಳ್ಳು ಕುಣಿತ ಹಾಗೂ ವಿವಿಧ ಕಲಾ ತಂಡಗಳು ಆಗಮಿಸಲಿವೆ, ಈ ಅದ್ದೂರಿ ಮೆರವಣಿಗೆಯಲ್ಲಿ ಸ್ಥಬ್ದ ಚಿತ್ರಗಳ ಮೆರವಣಿಗೆಯು ಇರುತ್ತದೆ. ಮೆರವಣಿಗೆ ತಹಶೀಲ್ದಾರ್ ಕಚೇರಿಯಿಂದ ಅಂಬಾದೇವಿ ದೇವಸ್ಥಾನ, ಬಸವೇಶ್ವರ ಸರ್ಕಲ್, ಹಳೇ ಬಜಾರ್, ಚೆನ್ನಮ್ಮ ಸರ್ಕಲ್, ಕನಕದಾಸ ಸರ್ಕಲ್, ಮೂಲಕ ಪುನಃ ತಹಶೀಲ್ದಾರ್ ಕಚೇರಿಗೆ ತಲುಪಿ ಮೆರವಣಿಗೆ ಮುಗಿಯಲಿದೆ. ನಂತರ ಪ್ರತಿ ವರ್ಷದ ಸಂಪ್ರದಾಯದಂತೆ ಸುಕಾಲಪೇಟೆ ರಸ್ತೆಯಲ್ಲಿರುವ ಬನ್ನಿ ಮಹಾಂಕಾಳಿ ಗುಡಿಗೆ ತೆರಳಿ ಬನ್ನಿ ಮುಡಿಯುವ ಕಾರ್ಯಕ್ರಮ ಜರುಗಲಿದೆ.

ಅ.30 ರಂದು ಮುಖ್ಯಮಂತ್ರಿ ಡಿಕೆ ಶಿವಕುಮಾರ ಆಗಮಿಸಿ, ಅಂಬಾದೇವಿಯ ನೂತನ ಕಟ್ಟಡವನ್ನು ಲೋಕಾರ್ಪಣೆಗೊಳಿಸಲಿದ್ದಾರೆ. ಈ ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಮಂತ್ರಿಗಳು, ಲೋಕೋಪಯೋಗಿ ಇಲಾಖೆಯ ಮಂತ್ರಿಗಳು, ಮುಜರಾಯಿ ಇಲಾಖೆಯ ಮಂತ್ರಿಗಳು, ಹಿಂದುಳಿದ ವರ್ಗಗಳ ಮಂತ್ರಿಗಳು, ಹಾಗೂ ಉನ್ನತ ಶಿಕ್ಷಣ ಸಚಿವರು ಸೇರಿದಂತೆ ಕೊಪ್ಪಳ, ರಾಯಚೂರು, ಜಿಲ್ಲೆಗಳ ಹಾಲಿ ಮಾಜಿ ಶಾಸಕರು, ಲೋಕಸಭಾ ಸದಸ್ಯರು, ವಿಧಾನ ಪರಿಷತ್ ಸದಸ್ಯರು, ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ ಎಂದರು.

ಈ ಸಂದರ್ಭದಲ್ಲಿ: ಅಂಬಾದೇವಿ ದೇವಸ್ಥಾನ ಸಮಿತಿ ಅಧ್ಯಕ್ಷ ರಂಗನಗೌಡ ಗೊರೇಬಾಳ, ಖಾಜಿ ಮಲ್ಲಿಕ್, ಅಂಬಣ್ಣ, ಶಂಕರಗೌಡ, ಶಿವಪ್ಪ, ರಾಘವೇಂದ್ರ ರೆಡ್ಡಿ, ಸೇರಿದಂತೆ ಅನೇಕರಿದ್ದರು.

OWNER, PUBLISHER, PRINTER BY IRFAN K H NO. 3/117, BALAGANUR, SINDHANOOR, RAICHUR-584138 KARNATAKA AND PRINTED AT SHIVANI PRINTERS, HULKOTI, NEW COURT, OPPOSITE PLOT NO. 28 RS NO. 312/3B, GARAG COMPLEX, GADAG-582101